ಸಂಪುಟ : 10 ಸಂಚಿಕೆ: 245 ಪುಟ : 4+2 ಬೆಲೆ: 3.00 ಮಂಗಳವಾರ ನವೆಂಬರ್ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 245 Pages : 4+2 Price : 3.00 Tuesday November 11 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




**ಜಿಲ್ಲಾ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿ.ಆರ್. ಪಾಟೀಲ**

# ಗಾಂಧೀಜಿಯವರ ಸ್ವರಾಜ್ಯದ ಕನಸು ನನಸು ಮಾಡೋಣ



**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗ್ರಾಮೀಣ ಅಭಿವೃದ್ಧಿಗೆ ಸರಕಾರದಿಂದ ಬಿಡುಗಡೆ ಆಗುವ ಅನುದಾನದ ಪ್ರತಿ ಪೈಸೆಯೂ ಸದುಪಯೋಗವಾಗಬೇಕು. ಯೋಜನೆಗೆ ಅನುಗುಣವಾಗಿ ಹಣ ಬಳಕೆ ಆಗಬೇಕು. ಅಭಿವೃದ್ಧಿಯಲ್ಲಿ ತಾರತಮ್ಯ ಆಗಬಾರದು. ಎಲ್ಲರನ್ನು ಸಮಾನವಾಗಿ ಕಾಣಬೇಕು. ಅಂದಾಗ ಮಾತ್ರ ಅಭಿವೃದ್ಧಿಗೆ ವೇಗ ಮತ್ತು ಸ್ಪಂದನೆ ಸಿಗುತ್ತದೆ ಎಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಎಲ್ಲ ಜಿಲ್ಲೆಗಳ 2026–27ನೇ ಸಾಲಿನ ಜಿಲ್ಲಾ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

'ನಮ್ಮ ಅಭಿವೃದ್ಧಿ ನಮ್ಮ ಸಹಭಾಗಿತ್ವದಲ್ಲಿ' ಎಂಬ ಬಲವಾದ ನಂಬಿಕೆ ಸಾಮಾನ್ಯ ಜನರಲ್ಲಿ ಮೂಡಬೇಕು. ಇದಕ್ಕಾಗಿ ಯೋಜನೆಗಳ ವಿಕೇಂದ್ರೀಕರಣ, ಅಧಿಕಾರದ ವಿಕೇಂದ್ರೀಕರಣ ಆಗಬೇಕು. ಅಂದಾಗ ಪಂಚಾಯತ ರಾಜ್ಯ ವ್ಯವಸ್ಥೆಗೆ ಸ್ವರೂಪ ಬರುತ್ತದೆ ಎಂದು ಅವರು ಹೇಳಿದರು.

ಹಳ್ಳಿ ಸ್ವಚ್ಛ ಮಾಡಿದರೆ, ಅದು ಸ್ವರ್ಗವಾಗುತ್ತದೆ. ಗ್ರಾಮಗಳಲ್ಲಿ ಶೌಚಾಲಯ ಹೆಚ್ಚಿಸಿ. ಗ್ರಾಮದ ಸ್ವಚ್ಛತೆಗೆ ತಿಂಗಳಗೊಂದು ದಿನ ಶ್ರಮದಾನ ಮಾಡಿ. ಅಧಿಕಾರಿಗಳ ನಡೆ ಜನರಲ್ಲಿ ಧನಾತ್ಮಕ ಪ್ರೇರಣೆ ಬೆಳೆಸಬೇಕು ಎಂದು ಹೇಳಿದರು.

ಸರಕಾರದ ನಿಯಮಗಳ ಚೌಕಟ್ಟಿನಲ್ಲಿ ಕೆಲಸ ಮಾಡಿ ಖುಷಿ ಪಡೋಣ. ಜನರ ಭಾವನೆಗಳನ್ನು ಗೌರವಿಸಿ, ಬೇಡಿಕೆಗಳಿಗೆ ಸ್ಪಂದಿಸಿದರೆ, ಜನರು ನಿಮ್ಮನ್ನು ದೈವಿ ಸ್ವರೂಪದಲ್ಲಿ ಕಾಣುತ್ತಾರೆ. ನಮಗೆ ಸಿಕ್ಕ ಸ್ಥಾನಮಾನ ಜನರ ಪ್ರಗತಿಗೆ ಬಳಸಿಕೊಳ್ಳಬೇಕು ಎಂದು ಹೇಳಿದರು.

ಜನರ ಪಾಲ್ಗೊಳ್ಳುವಿಕೆಯಿಂದ ಮಾತ್ರ ಅಭಿವೃದ್ಧಿ ಯೋಜನೆ ಯಶಸ್ವಿಯಾಗುತ್ತದೆ. ಜನರ ಬೇಡಿಕೆಗಳನ್ನು ಗ್ರಾಮ ಸಭೆಗಳ ಮೂಲಕ ಸಂಗ್ರಹಿಸಿ, ಯೋಜನೆಗಳನ್ನು ರೂಪಿಸಬೇಕು. ಜಿಲ್ಲಾ ವಾರ್ಷಿಕ ಅಭಿವೃದ್ಧಿ ಯೋಜನೆ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ಪ್ರತೀಕವಾಗಿರಬೇಕು. ಎಲ್ಲ ವರ್ಗದ ಜನರ, ಸಮುದಾಯಗಳ ಬೇಡಿಕೆಗಳನ್ನು ಗ್ರಾಮ ಮಟ್ಟದಲ್ಲಿ ಚರ್ಚಿಸಿ, ಸೇರ್ಪಡೆಗೊಳಿಸಬೇಕು ಎಂದರು.

> ಬರುವ ಮಾರ್ಚ್ 31ರೊಳಗೆ ಬೆಳಗಾವಿ ವಿಭಾಗದ ಎಲ್ಲ ಗ್ರಾಮಗಳಲ್ಲಿ ಸ್ಮಶಾನ ಸೌಲಭ್ಯ ಸಿಗಬೇಕು. ಇದು ಗ್ರಾಮಗಳ ಮೂಲಸೌಕರ್ಯವಾಗಿದ್ದು, ಆದ್ಯತೆ ನೀಡಬೇಕು. ಯೋಜನೆಗಳು ಅಧಿಕಾರಿಗಳ ಹಂತದಲ್ಲಿ ರೂಪಿತವಾಗಬಾರದು. ಸಾರ್ವಜನಿಕರ ಸಹಭಾಗಿತ್ವದಲ್ಲಿ ಯೋಜನೆಗಳು ರಚನೆ ಆಗಬೇಕು. ಜನರ ಬೇಡಿಕೆಗಳಿಗೆ ಸ್ಪಂದಿಸುವ ಯೋಜನೆಗಳು ದೀರ್ಘಕಾಲಿಕ ಬಾಳಿಕೆ ಬರುತ್ತವೆ.
>
> **– ಡಿ.ಆರ್. ಪಾಟೀಲ.**
> ರಾಜ್ಯ ವಿಕೇಂದ್ರೀಕರಣ ಸಮಿತಿಯ ಉಪಾಧ್ಯಕ್ಷರು.

> ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಯೋಜನೆಗಳು ಸರಿಯಾಗಿ ಅನುಷ್ಠಾನ ಆಗುವದರಿಂದ ಅನೇಕ ಸಮಸ್ಯೆಗಳು ಬಗೆಹರಿಯುತ್ತವೆ. ಸಾರ್ವಜನಿಕರು, ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಒಟ್ಟಾಗಿ ಹೋಗುವದರಿಂದ, ಸಮನ್ವಯದಿಂದ ಕೆಲಸ ಮಾಡುವದರಿಂದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ನವಲಗುಂದ ಶಾಸಕ ಎನ್. ಎಚ್. ಕೋನರಡ್ಡಿ ಮಾತನಾಡಿ, ಸರಕಾರದ ಯೋಜನೆಗಳನ್ನು ಜನರಿಗೆ ತಲುಪಿಸಲು ಶಾಸಕರೊಂದಿಗೆ, ಜನಪ್ರತಿನಧಿಗಳೊಂದಿಗೆ ಅಧಿಕಾರಿಗಳು ಕೈಜೋಡಿಸಬೇಕು. ರಾಜ್ಯಕ್ಕೆ ಮಾದರಿಯಾಗಿರುವ ಹೊಲದ ರಸ್ತೆಯು ನವಲಗುಂದ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 300 ಕೀ.ಮೀನಷ್ಟು ಆಗಿದೆ. ಅನೇಕ ಮಂತ್ರಿಗಳು, ಶಾಸಕರು, ಹಿರಿಯ ಅಧಿಕಾರಿಗಳು ಈ ಚಕ್ಕಡಿ ರಸ್ತೆ ಬಗ್ಗೆ ಶ್ಲಾಘಿಸಿದ್ದಾರೆ ಎಂದು ಹೇಳಿದರು.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮ ಸ್ವರಾಜ್ಯದ ಕಲ್ಪನೆಯನ್ನು ಸಾಕಾರಗೊಳಿಸುವುದು ಮುಖ್ಯವಾಗಿದೆ. ಯೋಜನಾ ಹಂತದಲ್ಲಿ ಪ್ರತಿಯೊಬ್ಬರಿಗೂ ಇಚ್ಛಾಶಕ್ತಿ ಇರಬೇಕು. ಗ್ರಾಮ ಸ್ವರಾಜ್ಯ ಪಾರದರ್ಶಕವಾಗಿ, ನಿಯಮಾನುಸಾರ ಆಗಬೇಕು. ಯೋಜನಾಭಿವೃದ್ಧಿಯು ಕ್ಷೇತ್ರಮಟ್ಟದಲ್ಲಿ ಸ್ಫೂರ್ತಿಯಿಂದ ಜಾರಿ ಆಗಬೇಕು. ಯೋಜನಾ ಅನುಷ್ಠಾನದಲ್ಲಿ ಲಭ್ಯ ತಾಂತ್ರಿಕತೆಯನ್ನು ಬಳಸಿಕೊಂಡು, ಜನರ ಬೇಡಿಕೆಗಳಿಗೆ ಅನುಗುಣವಾಗಿ ಅಭಿವೃದ್ಧಿಯ ಕರಡು ರೂಪಿಸಬೇಕು ಎಂದು ಹೇಳಿದರು.



ವೇದಿಕೆಯಲ್ಲಿ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಬೆಳಗಾವಿ ಜಿಲ್ಲಾಧಿಕಾರಿ ಮಹಮ್ಮದ ರೋಷನ್, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಧಾರವಾಡ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಬೆಳಗಾವಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಉತ್ತರ ಕನ್ನಡ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ದೀಲಿಶ್ ಸಶಿ ಮುಂತಾದವರಿದ್ದರು.

ಜಿಲ್ಲಾ ಕರಡು ಅಭಿವೃದ್ಧಿ ಯೋಜನೆ ತಯಾರಿ ಕುರಿತು ಧಾರವಾಡ ಜಿ.ಪಂ ಸಿಇಓ ದೀಪಕ ಮಡಿವಾಳರ, ಬೆಳಗಾವಿಯ ಗಂಗಾಧರ ದೀವಟೇರ, ಗದುಗಿನ ಕಂಬಾಳಿಮಠ, ಹಾವೇರಿಯ ಹೆಚ್.ವೈ. ಮೀಸಿ, ಉತ್ತರ ಕನ್ನಡದ ಸೋಮಶೇಖರ ಮಿಸ್ತ್ರಾ, ಬಾಗಲಕೋಟದ ಸಿಇಓ ಅಲ್ಲಮಪ್ರಭು ಅಲ್ಲಾಪುರ ಅವರು ವಿವರಿಸಿದರು.

**HRMS 2.0, KASS ಕುರಿತ ಕಾರ್ಯಾಗಾರಕ್ಕೆ ಎಸ್‌ಪಿ ರೋಹನ್ ಜಗದೀಶ್ ಚಾಲನೆ**

# ಕಾರ್ಯಾಗಾರದ ಸಂಪೂರ್ಣ ಸದ್ಬಳಕೆಯಾಗಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರಿ ನೌಕರರಿಗೆ ಇತ್ತೀಚೆಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಎಂಬ ನಗದುರಹಿತ ಆರೋಗ್ಯ ಸೇವೆ ಒದಗಿಸುವ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಇದರ ನೋಂದಣಿ, ಸರಿಯಾದ ಅನುಷ್ಠಾನಕ್ಕೆ ಇರುವ ಗೊಂದಲಗಳ ನಿವಾರಣೆಗೆ ಈ ಕಾರ್ಯಗಾರ ಸಹಕಾರಿಯಾಗಲಿದೆ ಎಂದು ಎಸ್‌ಪಿ ರೋಹನ್ ಜಗದೀಶ್ ಅಭಿಪ್ರಾಯಪಟ್ಟರು.



ಜಿಲ್ಲಾಧಿಕಾರಿಗಳ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಖಜಾನೆ ಇಲಾಖೆ ಗದಗ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಗದಗ ಶಾಖೆ ಇವರ ಆಶ್ರಯದಲ್ಲಿ HRMS ತಂತ್ರಾಂಶ–2.0 ಹಾಗೂ KASS ಕುರಿತು ಸೋಮವಾರ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ಸಿಬ್ಬಂದಿಗಳಿಗೆ ತಿಂಗಳ ಕೊನೆಯಲ್ಲಿ ಸರಿಯಾಗಿ ವೇತನ ಪಾವತಿಯಾಗುವಂತೆ ನೋಡಿಕೊಳ್ಳಬೇಕು. ನೌಕರರಿಗೆ ವೇತನ ಪಾವತಿ ಸಹ ತಾಂತ್ರಿಕ ಪರಿಣಿತ ನಿರ್ವಾಹಕನಿಂದ ಮಾತ್ರ ಸಾಧ್ಯ. ಹೆಚ್‌ಆರ್‌ಎಂಎಸ್ ▸▸3ನೇ ಪುಟಕ್ಕೆ

> ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಮಾಜಿ ಉಪಾಧ್ಯಕ್ಷ ರವಿ ಗುಂಜೀಕರ್ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ನೌಕರರ ಆರೋಗ್ಯ ಸಮಸ್ಯೆಗಳಿಗೆ ಆರೋಗ್ಯ ಸಂಜೀವಿನಿ ಯೋಜನೆ ಅತ್ಯಂತ ಸಹಕಾರಿಯಾಗಿದೆ. ಪ್ರತಿ ತಿಂಗಳು ಸಣ್ಣ ಪ್ರಮಾಣದ ವಂತಿಗೆ ನೀಡಬೇಕು, ಅನಾರೋಗ್ಯದ ಸಂದರ್ಭದಲ್ಲಿ ನಿಮಗೆ ಆರ್ಥಿಕವಾಗಿ ಹೆಚ್ಚು ಸಹಾಯವಾಗಲಿದೆ. ನಗದುರಹಿತ ಸೇವೆ ಜಾರಿಗೊಳಿಸಲು ಹಲವಾರು ವರ್ಷಗಳಿಂದ ರಾಜ್ಯ ಸರ್ಕಾರಿ ನೌಕರರ ಸಂಘ ಪ್ರಯತ್ನಿಸಿ ಯಶಸ್ವಿಯಾಗಿದೆ. ನೌಕರ ಬಾಂಧವರು ಇದರ ಸದ್ಬಳಕೆ ಮಾಡಿಕೊಳ್ಳುವಂತೆ ಕರೆ ನೀಡಿದರು.

**ಸವಣೂರಿನ ಕೀರ್ತಿ ಪದವಿ ಮಹಾವಿದ್ಯಾಲಯದ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ**

# ಕನ್ನಡಿಗರಿಗೆ ಸ್ವಾಭಿಮಾನದ ಬದುಕು ಸಿಗಲಿ


**■ ವಿಜಯಸಾಕ್ಷಿ ಸುದ್ದಿ, ಹಾವೇರಿ (ಸವಣೂರು)**

ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗ ಕೊಡುವುದು ಬಹಳ ಮುಖ್ಯ. ಕನ್ನಡಿಗರಿಗೆ ಕೆಲಸ ಸಿಕ್ಕರೆ ಸ್ವಾಭಿಮಾನ ಬರುತ್ತದೆ. ಕನ್ನಡಿಗರಿಗೆ ಸ್ವಾಭಿಮಾನದ ಬದುಕು ಸಿಕ್ಕರೆ ಕನ್ನಡಕ್ಕೆ ಸ್ವಾಭಿಮಾನ ಸಿಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.



ಸೋಮವಾರ ಹಾವೇರಿ ಜಿಲ್ಲೆಯ ಸವಣೂರು ತಾಲೂಕಿನ ಗುಂಡೂರ ಗ್ರಾಮದ ಕೀರ್ತಿ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಪದವಿಪೂರ್ವ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ ಹಾಗೂ ಕೀರ್ತಿ ಕನ್ನಡ ಕಲೋತ್ಸವ–2025ರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಂಕರಗೌಡರು ತಮ್ಮ ಬೇರುಗಳನ್ನು ಮರೆತಿಲ್ಲ. ಯಾವ ನೆಲ ಅನ್ನ, ಆಶ್ರಯ ಕೊಟ್ಟಿದೆಯೋ ಆ ನೆಲದ ಋಣ ತೀರಿಸಬೇಕೆಂದು ಪದವಿ ಕಾಲೇಜು ತೆರೆದರು. ಬಹಳ ಕಷ್ಟದಲ್ಲಿ ಪದವಿ ಕಾಲೇಜು ತೆರೆದು ಯಶಸ್ವಿಯಾಗಿ ಮುನ್ನಡೆಸುತ್ತಿದ್ದಾರೆ. ಈ ಕಾಲೇಜಿನ ಉದ್ಘಾಟನೆಯನ್ನು ಅದ್ದೂರಿಯಾಗಿ ಮಾಡಿದ್ದರು. ಗುಣಮಟ್ಟದ ಶಿಕ್ಷಣ ಕೊಡುವ ಕೆಲಸ ▸▸3ನೇ ಪುಟಕ್ಕೆ




॥ ಶ್ರೀ ಗುರು ಪ್ರಸನ್ನ ॥

**ಅತಿರುದ್ರ ಮಹಾ ಯಾಗ ಸೇವಾ ಸಮಿತಿ**

ಗದಗ-ಬೆಟಗೇರಿ

**ಗದಗ ನಗರದಲ್ಲಿ ಪ್ರಪ್ರಥಮ ಬಾರಿಗೆ ನಡೆಯುತ್ತಿರುವ 9 ಅಗ್ನಿಕುಂಡದ ಅತಿರುದ್ರ ಮಹಾಯಜ್ಞ ಹಾಗೂ ಕಿರಿಯ ಕುಂಭಮೇಳ ಕಾರ್ಯಕ್ರಮದ**

ದಿನಾಂಕ : 11-11-2025ರ ಬೆಳಿಗ್ಗೆ 9-00 ಘಂಟೆಗೆ

**5555 ಮಾತೆಯರಿಂದ ಬೃಹತ್ ಕುಂಭದ ಮೆರವಣಿಗೆ ಹಾಗೂ ನಾಗಾ ಸಾಧುಗಳ ಭವ್ಯ ಶೋಭ ಯಾತ್ರೆ, ಪ್ರಾರಂಭವಾಗಿ ನಗರದ ಪ್ರಮುಖ ಮಾರ್ಗದಲ್ಲಿ ಸಂಚರಿಸಿ ವಿದ್ಯಾದಾನ ಸಮಿತಿ ಮೈದಾನದಲ್ಲಿ ಸ್ಥಾಪಿಸಿದ ಯಾಗ ಶಾಲೆಯ ಪ್ರವೇಶ**

**ಭವ್ಯ ಶೋಭಾ ಯಾತ್ರೆ ಹಾಗೂ ಮೆರವಣಿಗೆಗೆ ಚಾಲನೆ**

ದಿನಾಂಕ : 11 ನವ್ಹೆಂಬರ್ ಮಂಗಳವಾರ ಸಮಯ ಬೆಳಿಗ್ಗೆ 9-30 ಕ್ಕೆ

ಸ್ಥಳ : ತ್ರಿಕುಟೇಶ್ವರ ದೇವಸ್ಥಾನ ಸಂಕಲ್ಪ ಪೂಜೆಯೊಂದಿಗೆ ಕುಂಭ ಮೆರವಣಿಗೆಗೆ ಚಾಲನೆ

ನೇತೃತ್ವ : **ಪೂಜ್ಯ ಶ್ರೀ ಸಹದೇವಾನಂದ ಗಿರಿ ಜಿ ಮಹಾರಾಜರು**
ಕಾರ್ಯದರ್ಶಿ, ಶ್ರೀ ಪಂಚದಶನಂ ಜುನಾ ಆಖಾಢ ಪೀಠಾಧೀಶ್ವರ, ಶ್ರೀ ಅಮರನಾಥ ಮಹಾದೇವ ಮಠ, ಕುಷ್ಟಗಿ

ಚಾಲನೆ : **ಪೂಜ್ಯ ಶ್ರೀ ಕಲ್ಲಯ್ಯಜ್ಜನವರು**
ವೀರೇಶ್ವರ ಪುಣ್ಯಾಶ್ರಮ, ಗದಗ

ಗೌರವ ಉಪಸ್ಥಿತಿ : **ಶ್ರೀ ಡಿ.ಆರ್. ಪಾಟೀಲರು**
ಮಾಜಿ ಶಾಸಕರು ಹಾಗೂ ಗೌರವ ಅಧ್ಯಕ್ಷರು ಅತಿರುದ್ರ ಮಹಾ ಯಾಗ ಸಮಿತಿ
**ಶ್ರೀ ಸಿ.ಸಿ. ಪಾಟೀಲರು** ಮಾಜಿ ಸಚಿವರು,
ಶಾಸಕರು ನರಗುಂದ ಹಾಗೂ ಗೌರವಾಧ್ಯಕ್ಷರು ಅತಿರುದ್ರ ಮಹಾ ಯಾಗ ಸಮಿತಿ

ಉಪಸ್ಥಿತರು : **ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸರ್ವ ಸದಸ್ಯರು ಮತ್ತು ಮಹಿಳಾ ಘಟಕದ ಪ್ರಮುಖರು ಅತಿರುದ್ರ ಮಹಾ ಯಾಗ ಸೇವಾ ಸಮಿತಿ, ಗದಗ**

**ಮೆರವಣಿಗೆ ಹಾಗೂ ಶೋಭಾ ಯಾತ್ರೆ, ವಿದ್ಯಾದಾನ ಸಮಿತಿ ಮೈದಾನದಲ್ಲಿಯ ಯಾಗ ಶಾಲೆಯ ಪ್ರವೇಶದ ನಂತರ**

**ಉದ್ಘಾಟನಾ ಸಮಾರಂಭ**

ಸಮಯ : ಮಧ್ಯಾಹ್ನ 12-30 ಘಂ.

ನೇತೃತ್ವ : **ಪೂಜ್ಯ ಶ್ರೀ ಸಹದೇವಾನಂದ ಗಿರಿ ಜಿ ಮಹಾರಾಜ**
ಕಾರ್ಯದರ್ಶಿ, ಶ್ರೀ ಪಂಚದಶನಂ ಜುನಾ ಆಖಾಢ ಪೀಠಾಧೀಶ್ವರ, ಶ್ರೀ ಅಮರನಾಥ ಮಹಾದೇವ ಮಠ, ಕುಷ್ಟಗಿ

ಸಾನಿಧ್ಯ : **ಶ್ರೀ ಷ.ಬ್ರ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು**
ಹಿರೇಮಠ ನರೇಗಲ್ಲ, ಮೂಲಿಮಠ ಸವದತ್ತಿ

ಉದ್ಘಾಟನೆ : **ಪೂಜ್ಯ ಶ್ರೀ ಕಲ್ಲಯ್ಯ ಅಜ್ಜನವರು**
ಪಂಚಾಕ್ಷರ ಗವಾಯಿಗಳಮಠ, ಗದಗ

ಅಧ್ಯಕ್ಷತೆ : **ಶ್ರೀ ಕಿರಣ ಪ್ರಕಾಶ ಭೂಮಾ**
ಅಧ್ಯಕ್ಷರು, ಅತಿರುದ್ರ ಮಹಾ ಯಾಗ ಸಮಿತಿ, ಗದಗ

## ತಂಬಾಕು ನಿಯಂತ್ರಣ ಕಾರ್ಯಾಚರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಾಥಮಿಕ ಆರೋಗ್ಯ ಕೇಂದ್ರ ನಿಡಗುಂದಿ, ತಂಬಾಕು ನಿಯಂತ್ರಣ ಕೋಶ ಗದಗ ಹಾಗೂ ನರೇಗಲ್ಲ ಪೊಲೀಸ್ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ನರೇಗಲ್ಲದ ಸಾರ್ವಜನಿಕ ಸ್ಥಳಗಳಲ್ಲಿ ಇರುವ ಅಂಗಡಿಗಳ ಮೇಲೆ ಜಂಟಿ ಕಾರ್ಯಾಚರಣೆ ನಡೆಸಿ ತಂಬಾಕು ವಸ್ತುಗಳನ್ನು ಮಾರುವವರಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿದೆ ಎಂದು ಆರೋಗ್ಯ ನಿರೀಕ್ಷಣಾ ಅಧಿಕಾರಿ ಮಂಜುನಾಥ ಜಾಲೀಹಾಳ ತಿಳಿಸಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಗದಗ ತಂಬಾಕು ನಿಯಂತ್ರಣ ಕೋಶದ ಬಿ.ಸಿ. ಚಿತ್ರಗಿ, ಎಎಸ್‌ಐ ಎಸ್.ಎಲ್. ಹೊಸಳ್ಳಿ, ಪಡಿಯಪ್ಪ ಹಲಗೇರಿ, ಕಲ್ಲಪ್ಪ ಬೂದಿಹಾಳ, ಮಂಜುನಾಥ ಜಾಲಿಹಾಳ ಇದ್ದರು. ನರೇಗಲ್ಲದ ವಿವಿಧ ಅಂಗಡಿಗಳ ಮೇಲೆ ದಾಳಿ ಮಾಡಿದ ತಂಡವು ಅಂಗಡಿಕಾರರಿಂದ ಒಟ್ಟು 1900 ರೂ ದಂಡ ವಸೂಲು ಮಾಡಿ ಸರಕಾರಕ್ಕೆ ಭರಣಾ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಚಿತ್ರಗಿ, ತಂಬಾಕು ಮುಕ್ತ ವಲಯ ಎಂದರೆ ಧೂಮ್ರಪಾನ ಅಥವಾ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದ ವಲಯ ಎಂದರ್ಥ. ಇಂತಹ ಪ್ರದೇಶದಲ್ಲಿ ತಂಬಾಕು ಮಾರುವುದಾಗಲಿ, ಸೇವನೆ ಮಾಡುವುದಾಗಲಿ, ಧೂಮ್ರಪಾನ ಮಾಡುವುದಾಗಲಿ ಎಲ್ಲವೂ ಅಪರಾಧ. ಇಂತಹ ಪ್ರಕರಣಗಳಲ್ಲಿ ಸಂವಿಧಾನದ ಸೆಕ್ಷನ್ 4ರ ಪ್ರಕಾರ 200ರೂ. ದಂಡ, ಸೆಕ್ಷನ್ 22ರ ಪ್ರಕಾರ ಮೊದಲ ಅಪರಾಧಕ್ಕೆಒಂದು ಸಾವಿರ ರೂ. ದಂಡ ಅಥವಾ ಎರಡು ವರ್ಷ ಜೈಲು ಶಿಕ್ಷೆ ವಿಧಿಸಲಾಗುವುದು ಎಂದರು.

ಶಿರಹಟ್ಟಿಯ ಬೃಹತ್ ಹಿಂದೂ ಸಮಾವೇಶದಲ್ಲಿ ಪ್ರಮೋದ ಮುತಾಲಿಕ ದಿಕ್ಸೂಚಿ ಭಾಷಣ

# ಒಗ್ಗಟ್ಟಿನಿಂದ ದೇಶ ಉಳಿಸಲು ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಭಕ್ತ ಕನಕದಾಸರು ಕುಲ ಕುಲವೆಂದು ಹೊಡೆದಾಡದಿರಿ ಎಂದು ಸಾವಿರಾರು ವರ್ಷಗಳ ಹಿಂದೆಯೇ ಸಮಾಜದಲ್ಲಿ ತಮ್ಮ ವಚನ ಸಾಹಿತ್ಯದ ಮೂಲಕ ಜಾಗೃತಿಯನ್ನು ಮೂಡಿಸಿದ್ದಾರೆ. ಇವರ ವಿಚಾರಧಾರೆಗಳು ಇಂದಿನ ಕಲುಷಿತಗೊಂಡಿರುವ ಸಮಾಜಕ್ಕೆ ಅವಶ್ಯಕವಿದೆ. ಹಾಗೆಯೇ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರ ಕಿತ್ತೂರು ಚೆನ್ನಮ್ಮ ಅವರ ದೇಶಪ್ರೇಮವನ್ನು ಮನೆ ಮನೆಗೆ ತಲುಪಿಸುವ ಕೆಲಸವಾಗಬೇಕಾಗಿದೆ. ಆದ್ದರಿಂದ ಎಲ್ಲ ಹಿಂದೂ ಸಮಾಜಗಳು ಒಗ್ಗಟ್ಟಾಗಿ ದೇಶ ಉಳಿಸಲು ಮುಂದಾಗಬೇಕೆಂದು ಶ್ರೀರಾಮಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ ಮುತಾಲಿಕ ಕರೆ ನೀಡಿದರು.

ಅವರು ಶನಿವಾರ (ತಡರಾತ್ರಿ) ಶಿರಹಟ್ಟಿಯ ಶ್ರೀ ಎಫ್.ಎಂ. ಡಬಾಲಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಜರುಗಿದ ಗದಗ ಜಿಲ್ಲಾ ವಿವಿಧ ಹಿಂದೂ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ದಾಸ ಶ್ರೇಷ್ಠ ಕನಕದಾಸರ ಮತ್ತು ವೀರರಾಣಿ ಕಿತ್ತೂರು ಚೆನ್ನಮ್ಮ ಅವರ ಜಯಂತ್ಯುತ್ಸವದ ಪ್ರಯುಕ್ತ ಬೃಹತ್ ಹಿಂದೂ ಸಮಾವೇಶದಲ್ಲಿ ಮಾತನಾಡಿದರು.



ಕಳೆದ 100 ವರ್ಷಗಳಿಂದಲೂ ರಾಷ್ಟ್ರೀಯ ಸ್ವಯಂ ಸೇವಕ ಸಂಘ ರಾಷ್ಟ್ರಾದ್ಯಂತ ಜಾಗೃತಿ ಮೂಡಿಸುತ್ತಿದ್ದರೂ ಸಹ ಹಿಂದೂಗಳು ಇಲ್ಲಿಯವರೆಗೂ ಒಗ್ಗಟ್ಟಾಗಿ ಕಾಣಿಸದೇ ಇರುವದರಿಂದ ಪೆಹಲ್ಗಾಮ್ ಸೇರಿದಂತೆ ವಿವಿಧ ಕಡೆಗಳಲ್ಲಿ ಮುಸ್ಲಿಂ ಭಯೋತ್ಪಾದಕರು ಅಮಾಯಕ ಹಿಂದೂಗಳ ಮೇಲೆ ದೌರ್ಜನ್ಯ, ದಬ್ಬಾಳಿಕೆ, ಹಿಂದೂ ದೇವಸ್ಥಾನಗಳ ಮೇಲೆ ಕಲ್ಲೆಸೆತ, ಹಿಂದೂ ದೇವರುಗಳಿಗೆ ಅವಮಾನ ಹೀಗೆ ಹತ್ತು ಹಲವು ವಿಧ್ವಂಸಕ ಕೃತ್ಯದಲ್ಲಿ ಭಾಗಿಯಾಗುವುದರ ಮೂಲಕ ಹಿಂದೂಗಳ ಭಾವನೆಗೆ ಧಕ್ಕೆ ತರುವ ಕೆಲಸವು ನಿರಂತರವಾಗಿ ನಡೆಯುತ್ತಿವೆ. ಇದನ್ನು ತಡೆಯುವುದಕ್ಕಾಗಿ ಹಿಂದೂಗಳು ಪಣ ತೊಡುವುದು ಅವಶ್ಯವಿದೆ. ಎಲ್ಲ ಮಹಾಪುರುಷರು ಯಾವುದೇ ಒಂದು ಜಾತಿಗೆ ಸೀಮಿತರಾಗಿರಲಿಲ್ಲ. ನಾನು ಹಿಂದೂ, ನಾನು ಬಂಧು, ನಾ ಒಂದು ಎನ್ನುವ ದೃಢ ಸಂಕಲ್ಪ ಮಾಡಬೇಕು. ಹಿಂದೂಗಳನ್ನು ಕೆಣಿಕಿದರೆ ನಮ್ಮ ಶಕ್ತಿಯನ್ನು ತೋರಿಸಬೇಕು ಎಂದರು.

ಡಿಜೆ ಹಳ್ಳಿ, ಹುಬ್ಬಳ್ಳಿಯ ಗಲಭೆ, ಪೆಹಲ್ಗಾಮ್‌ನಲ್ಲಿ ನಡೆದ ಘಟನೆ ಹೀಗೆ ಅನೇಕ ಕಡೆಗಳಲ್ಲಿ ಹಿಂದೂಗಳ ಮೇಲೆ ನಿರಂತರ ದಾಳಿ ನಡೆಯುತ್ತಿವೆ. ಪೊಲೀಸರ ನೈತಿಕ ಬಲ ಕುಸಿದಿದ್ದರಿಂದ ಎಲ್ಲ ಕಡೆಗಳಲ್ಲಿಯೂ ನೆಮ್ಮದಿಯ ವಾತಾವರಣವಿಲ್ಲ. ಆದ್ದರಿಂದ 2028ಕ್ಕೆ ನಮ್ಮ ಸರಕಾರ ಬಂದರೆ ಪೊಲೀಸ್ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ, ಎಲ್ಲರಿಗೂ ಎಕೆ-47 ಗನ್, ಮದರಸಾ ಬಂದ್‌ನಂತಹ ಬಿಗಿ ಕ್ರಮಗಳನ್ನು ಜಾರಿಗೊಳಿಸಲಾಗುವುದು. ಆದ್ದರಿಂದ ಎಲ್ಲ ಸಮಾಜದ ಹಿಂದೂಗಳು ಒಗ್ಗಟ್ಟಾಗಿ ದೇಶ ಕಟ್ಟುವ ಕೆಲಸದಲ್ಲಿ ಭಾಗಿಯಾಗಬೇಕೆಂದು ಹೇಳಿದರು.

ಕ'ೂಡ'ಲಸ'ಂಗ'ವ'ು ಪಂಚಮಸಾಲಿಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಹುಲ್ಲೂರಿನ ಅಮೋಘ ಸಿದ್ದೇಶ್ವರ ಸ್ವಾಮೀಜಿ, ಶ್ರೀರಾಮ ಸೇನೆಯ ರಾಜ್ಯ ಸಂಚಾಲಕ ರಾಜು ಖಾನಪ್ಪನವರ, ಸಂತೋಷ ಕುರಿ, ನಾಗರಾಜ ಲಕ್ಕುಂಡಿ, ಬಸವರಾಜ ಪಲ್ಲೇದ, ರಾಮಣ್ಣ ಕಂಬಳಿ, ಶಂಕರ ಮರಾಠೆ, ಪ್ರವೀಣಗೌಡ ಪಾಟೀಲ, ಶಂಕರ ಭಾವಿ, ಜಾನು ಲಮಾಣಿ, ಆನಂದ ಸ್ವಾಮಿ, ಬಸವರಾಜ ಕಲ್ಯಾಣಿ, ಈರಣ್ಣ ಕೋಟಿ, ದೇವೂ ಪೂಜಾರ, ಮಂಜುನಾಥ ಸೊಂಟನೂರ, ಶಿವಾನಂದ ಬಟ್ಟೂರ ಮುಂತಾದವರು ಉಪಸ್ಥಿತರಿದ್ದರು.

> ವಿಜಯಪುರದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಮಾತನಾಡಿ, ರಾಜ್ಯದ ಜನತೆ ಉತ್ತರ ಪ್ರದೇಶದ ಮಾದರಿಯಲ್ಲೇ ರಾಜ್ಯದಲ್ಲಿ ಆಡಳಿತ ಬರಬೇಕೆನ್ನುವ ನಿರೀಕ್ಷೆಯಲ್ಲಿದ್ದಾರೆ. ಗಾಂಧಿ ಮತ್ತು ನೆಹರು ಮಾಡಿದ ತಪ್ಪಿನಿಂದ ಇಂದು ದೇಶವು ಅನೇಕ ತೊಂದರೆಗಳನ್ನು ಅನುಭವಿಸುತ್ತಿದೆ. ನೇತಾಜಿ ಸುಭಾಸ್‌ಚಂದ್ರ ಬೋಸ್ ಮತ್ತು ಭಗತ್‌ಸಿಂಗ್‌ರಂತಹ ಮಹನೀಯರಿಂದ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ನೆಹರು ವಕ್ಫ್ ಆಸ್ತಿಗಳ ರಕ್ಷಣೆಗೆ ಕಾಯ್ದೆ ಜಾರಿಗೊಳಿಸಿದ್ದರು, ಇದನ್ನು ನರೇಂದ್ರ ಮೋದಿ ಅವರು ತಿದ್ದುಪಡಿ ಮಾಡಿ ದೇಶದ ಆಸ್ತಿಯನ್ನು ರಕ್ಷಣೆ ಮಾಡಿದ್ದಾರೆ.

ಬಸವೇಶ್ವರ ನಗರದಲ್ಲಿ ಶರಣೆ ದಾನಮ್ಮತಾಯಿಯ ಪುರಾಣ ಪ್ರವಚನ ನಾಳೆಯಿಂದ

# 19ನೇ ವರ್ಷದ ಪ್ರವಚನ, ಧಾರ್ಮಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬಸವೇಶ್ವರ ನಗರದ ಶ್ರೀ ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ವರದಾನೇಶ್ವರಿ ಮಹಿಳಾ ಮಂಡಳದ ಸಂಯುಕ್ತ ಆಶ್ರಯದಲ್ಲಿ ನ. 12ರಿಂದ 20ರವರೆಗೆ ಸಂಜೆ 6 ಗಂಟೆಗೆ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಶರಣೆ ದಾನಮ್ಮತಾಯಿಯ 19ನೇ ವರ್ಷದ ಪ್ರವಚನ, ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.



ನ. 12ರಂದು ಸಂಜೆ 6 ಗಂಟೆಗೆ ಗದಗ ತೋಂಟ-ದಾರ್ಯ ಮಠದ ಪೂಜ್ಯ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಉದ್ಘಾಟನಾ ಸಮಾರಂಭ ಜರುಗಲಿದೆ. ಅಧ್ಯಕ್ಷತೆಯನ್ನು ಶಾರದಾ ಹಚಡದ ವಹಿಸುವರು. ಮುಖ್ಯ ಅತಿಥಿಗಳಾಗಿ ಶೈಲಜಾ ಕೊಡೇಕಲ್ ಹಾಗೂ ದೇವಸ್ಥಾನದ ಟ್ರಸ್ಟಿಗಳು ಆಗಮಿಸುವರು. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರು ರಚಿಸಿದ ದಾನಮ್ಮದೇವಿ ಪುರಾಣವನ್ನು ನಂದಿಕೇಶ್ವರದ ವೀರೇಶ್ವರ ಶಾಸ್ತ್ರೀಗಳಿಂದ ಜರುಗುವ ಪುರಾಣ ಪ್ರವಚನಕ್ಕೆ ಮೃತ್ಯುಂಜಯ ಹಿರೇಮಠ, ಹೇಮಂತಕುಮಾರ ಹಿರೇಮಠ ಸಂಗೀತ ಸಾಥ್ ನೀಡುವರು.

ನ. 14ರಂದು ಸಂಜೆ 6 ಗಂಟೆಗೆ ಶರಣೆ ದಾನಮ್ಮತಾಯಿಯ ತೊಟ್ಟಿಲೋತ್ಸವ, ನಾಮಕರಣ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶೋಭಾ ಗುಗ್ಗರಿ ವಹಿಸುವರು. ಅತಿಥಿಗಳಾಗಿ ವಿಜಯಲಕ್ಷ್ಮೀ ಕಾತರಕಿ, ದೀಪಾ ಬೇವಿನಮರದ, ಸುಧಾ ಕೆರೂರು, ವಿಜಯಲಕ್ಷ್ಮೀ ಕುಬಸದ, ನಾಗರತ್ನಾ ಬಡಿಗಣ್ಣವರ ಆಗಮಿಸುವರು.

> ನ. 18ರಂದು ಸಂಜೆ 6 ಗಂಟೆಗೆ ಶರಣೆ ದಾನಮ್ಮ ತಾಯಿ ಹಾಗೂ ಸೋಮಲಿಂಗ ವಿವಾಹ ಸಮಾರಂಭವನ್ನು ಗಂಗಾಧರ ಹಿರೇಮಠ ನಡೆಸಿಕೊಡುವರು. ಅಧ್ಯಕ್ಷತೆಯನ್ನು ಮಹಾನಂದಾ ಕಾತರಕಿ ವಹಿಸುವರು. ಅತಿಥಿಗಳಾಗಿ ಸುಧಾ ಚಳ್ಳಮರದ, ಶಾಂತಕ್ಕ ತಡಸದ, ಶ್ರೀದೇವಿ ಮೂರಶಿಳ್ಳಿನ, ಪ್ರಮೀಳಾ ನಾರಾಯಣಪೂರ, ರತ್ನಕ್ಕ ಕಲ್ಲೂರ, ಮಹಾನಂದ ಯಂಡಿಗೇರಿ, ಸುಜಾತಾ ಕಾಡಪ್ಪನವರ ಆಗಮಿಸುವರು.

ನ. 20ರಂದು ಮುಂಜಾನೆ 8 ಗಂಟೆಗೆ ಶರಣೆ ದಾನಮ್ಮ ತಾಯಿಯ ಪಲ್ಲಕ್ಕಿ ಉತ್ಸವ ಹಾಗೂ ಕುಂಭಮೇಳ. ಮುಂಜಾನೆ 9 ಗಂಟೆಗೆ ಪುರಾಣ ಮಂಗಲೋತ್ಸವ ಜರುಗುವದು. ಸಾನ್ನಿಧ್ಯವನ್ನು ಅಡ್ನೂರನ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ರಾಚಪ್ಪ ಮಿಣಜಗಿ, ಶಿವಕುಮಾರ ಬೇವಿನಮರದ ವಹಿಸುವರು. ಪ್ರಸಾದ ಸೇವೆ ವಹಿಸಿದ ದಾನಿಗಳನ್ನು ಸನ್ಮಾನಿಸಲಾಗುವುದು. ದೇವಸ್ಥಾನದ ಟ್ರಸ್ಟಿಗಳಾದ ರಾಚಪ್ಪ ಮಿಣಜಗಿ, ಶಿವಬಸಪ್ಪ ಯಂಡಿಗೇರಿ, ಪ್ರದೀಪ ಕೊಡೇಕಲ್, ಜಗದೀಶ ಯಚ್ಚಲಗಾರ, ಶಿವಕುಮಾರ ಬೇವಿನಮರದ, ಶಂಭು ಕಾರಕಟ್ಟಿ, ಸುರೇಶ ಶಿರಿಗಣ್ಣವರ, ಅರುಣಕುಮಾರ ಮುನವಳ್ಳಿ ಹಾಗೂ ಧರ್ಮದರ್ಶಿ ಶಂಕರಲಿಂಗ ಗುಡಿ, ಪುರಾಣ ಸಮಿತಿಯ ಅಧ್ಯಕ್ಷೆ ಶಾರದಾ ಹಚಡದ, ಗೌರವಾಧ್ಯಕ್ಷೆ ಶೈಲಜಾ ಕೊಡೇಕಲ್, ಕಾರ್ಯದರ್ಶಿ ಸುರೇಖಾ ಪಿಳ್ಳಿ ಉಪಸ್ಥಿತರಿರುವರು.

ನ. 20ರಂದು ಸಂಜೆ 7 ಗಂಟೆಗೆ ವೀರಭದ್ರೇಶ್ವರ ಕಾರ್ತಿಕೋತ್ಸವ ಜರುಗಲಿದ್ದು, ಸಕಲ ಸದ್ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಟ್ರಸ್ಟ್ ಕಮಿಟಿ ವಿನಂತಿಸಿದೆ.

# ಕನಕದಾಸರು ಶ್ರೇಷ್ಠ ಸಮಾಜ ಚಿಂತಕರು



■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಅಂಕು-ಡೊಂಕುಗಳನ್ನು ತಿದ್ದಿ, ಭಕ್ತಿ ಮಾರ್ಗದ ಮೂಲಕ ಸಮಸಮಾಜಕ್ಕೆ ಪಣತೊಟ್ಟವರು ಕನಕದಾಸರು. ಕನಕದಾಸರ ತತ್ವ-ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಗದಗ ಅನ್ನದಾನೇಶ್ವರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎ.ಎಂ. ವಿದ್ಯಾಸಾಗರ ಹೇಳಿದರು.

ಅವರು ಅನ್ನದಾನೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಕನಕದಾಸರ ಜಯಂತ್ಯುತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕನಕದಾಸರು ದಾರ್ಶನಿಕರಾಗಿ, ಸಂತರಾಗಿ, ಸಮಾಜ ಚಿಂತಕರಾಗಿ ಆದರ್ಶ ಮಾರ್ಗ ತೋರಿದ್ದಾರೆ. ಅವರ ಮೌಲ್ಯಯುತ ತತ್ವಗಳನ್ನು ಇಂದಿನ ಯುವಕರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಉಪನ್ಯಾಸಕರಾದ ಎಸ್.ಎ. ಯಳವತ್ತಿ, ವೆಂಕಟರಾವ್, ಸಿ.ಡಿ. ನದಾಫ್, ಐ.ಎಂ. ಮುಳಗುಂದ, ಲಕ್ಷ್ಮೀ, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

## ಬಹುಪತ್ನಿತ್ವ ನಿಷೇಧ ಮಸೂದೆಗೆ ಅಸ್ಸಾಂ ಸಂಪುಟ ಅಸ್ತು : ಬುಡಕಟ್ಟು ಸಮುದಾಯಗಳಿಗೆ ವಿನಾಯಿತಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ


ಬಹುಪತ್ನಿತ್ವ ನಿಷೇಧಿಸುವ ಮಸೂದೆಯನ್ನು ರಾಜ್ಯ ಸಚಿವ ಸಂಪುಟ ಅನುಮೋದಿಸಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಭಾನುವಾರ (ನ.9) ಹೇಳಿದ್ದಾರೆ. ಮಸೂದೆಯಲ್ಲಿ ಗರಿಷ್ಠ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸುವುದನ್ನು ಪ್ರಸ್ತಾಪಿಸಲಾಗಿದೆ ಎಂದು ವರದಿಯಾಗಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಶರ್ಮಾ, ಅಸ್ಸಾಂ ಬಹುಪತ್ನಿತ್ವ ನಿಷೇಧ ಮಸೂದೆಯನ್ನು ನವೆಂಬರ್ 25ರಂದು ವಿಧಾನಸಭೆಯಲ್ಲಿ ಮಂಡಿಸಲಾಗುವುದು. ಕರಡು ಶಾಸನವು ಪರಿಶಿಷ್ಟ ಪಂಗಡ ಸಮುದಾಯಗಳಿಗೆ ವಿನಾಯಿತಿ ನೀಡುತ್ತದೆ ಎಂದು ತಿಳಿಸಿದ್ದಾರೆ. ಸಂವಿಧಾನದ ಆರನೇ ಪರಿಚ್ಛೇದದಡಿಯಲ್ಲಿ ಬರುವ ಬೋಡೋಲ್ಯಾಂಡ್ ಪ್ರಾದೇಶಿಕ ಮಂಡಳಿ, ಕರ್ಬಿ ಆಂಗ್ಲಾಂಗ್ ಸ್ವಾಯತ್ತ ಮಂಡಳಿ ಮತ್ತು ದಿಮಾ ಹಸಾವೊ ಸ್ವಾಯತ್ತ ಮಂಡಳಿಯ ಪ್ರದೇಶಗಳಿಗೆ ಹೊಸ ಕಾನೂನು ಸದ್ಯಕ್ಕೆ ಅನ್ವಯಿಸುವುದಿಲ್ಲ ಎಂದು ಶರ್ಮಾ ಹೇಳಿದ್ದಾರೆ. ಅಸ್ಸಾಂನ ಮೂವತ್ತೈದು ಜಿಲ್ಲೆಗಳ ಪೈಕಿ ಎಂಟು ಜಿಲ್ಲೆಗಳು ಮೇಲೆ ಉಲ್ಲೇಖಿಸಿರುವ ಮೂರು ಮಂಡಳಿಗಳ ಭಾಗವಾಗಿವೆ. ಸಂವಿಧಾನದ ಆರನೇ ಪರಿಚ್ಛೇದ ಬುಡಕಟ್ಟು ಪ್ರಾಬಲ್ಯದ ಪ್ರದೇಶಗಳಲ್ಲಿ ನಾಗರಿಕರಿಗೆ ಭೂಮಿಯ ರಕ್ಷಣೆ ಮತ್ತು ನಾಮಮಾತ್ರದ ಸ್ವಾಯತ್ತತೆಯನ್ನು ಖಾತರಿಪಡಿಸುತ್ತದೆ.

## ಶಿರಡಿ ಸಾಯಿಬಾಬಾ ಸತ್ಸಂಗದಿಂದ ಎಲುಬಿನ ಸಾಂದ್ರತೆಯ ಉಚಿತ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶಿರಡಿ ಸಾಯಿಬಾಬಾ ಸತ್ಸಂಗ ಗದಗ-ಬೆಟಗೇರಿ ಹಾಗೂ ಅಕ್ವಾ ಲೈಫ್ ಸೈನ್ಸ್ ಸಹಯೋಗದಲ್ಲಿ ಏರ್ಪಡಿಸಿದ್ದ 50 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಎಲುಬಿನ ಸಾಂದ್ರತೆಯ ಉಚಿತ ಪರೀಕ್ಷೆ ಹಾಗೂ ಉಚಿತ ಚಿಕಿತ್ಸಾ ಶಿಬಿರದಲ್ಲಿ 110ಕ್ಕೂ ಹೆಚ್ಚು ಜನರು ಪ್ರಯೋಜನ ಪಡೆದುಕೊಂಡರು.



ಗದುಗಿನ ಖ್ಯಾತ ಎಲುಬು-ಕೀಲು ತಜ್ಞ ವೈದ್ಯರಾದ ಡಾ. ಸಂಗಮನಾಥ ಶೆಟ್ಟರ, ಡಾ. ಎಸ್.ಡಿ. ಯರಗೇರಿ ನೇತೃತ್ವದಲ್ಲಿ ಅಕ್ವಾ ಲೈಫ್ ಸೈನ್ಸ್‌ನ ತಾಂತ್ರಿಕ ತಜ್ಞರ ತಂಡದಿಂದ ಶಿಬಿರವು ಯಶಸ್ವಿಯಾಗಿ ಜರುಗಿ-ತು. ಅಗತ್ಯವಿದ್ದವರಿಗೆ ಚಿಕಿತ್ಸೆ ಹಾಗೂ ಔಷಧವನ್ನು ಉಚಿತವಾಗಿ ನೀಡಲಾಯಿತು. ಶಿರಡಿ ಸಾಯಿಬಾಬಾ ಸತ್ಸಂಗದ ಅಧ್ಯಕ್ಷ ಮಹೇಶಗೌಡ ತಲೇಗೌಡ್ರ, ಉಪಾಧ್ಯಕ್ಷ ವಿ.ಆರ್. ಕುಂಬಾರ, ಉಮೇಶ ನಾಲ್ವಾಡ, ಕಾರ್ಯದರ್ಶಿ ಅಮೃತ ವಾಲಿ, ಸಹ ಕಾರ್ಯದರ್ಶಿ ಸಿದ್ದಮಲ್ಲಪ್ಪ ಎಸ್.ಕಾವೇರಿ, ಖಜಾಂಚಿ ದೀಪಕ ಸುಲಾಖೆ, ರಘುವೀರ ಪತ್ತೇಪೂರ, ಸುಶೀಲಾ ಕೋಟಿ, ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ, ರಾಮಣ್ಣ ಕಾಶಪ್ಪನವರ, ಸಿದ್ಧಣ್ಣ ಗೌರಿಪೂರ, ರವಿರಾಜ ಕೋಟಿ, ಯಲ್ಲೋಸಾ ಹಬೀಬ, ರವಿಪ್ರಕಾಶ ರೆಡ್ಡಿ, ಶಶಿಕಾಂತ ಅರಳಿ ಮುಂತಾದವರು ಶಿಬಿರದ ಯಶಸ್ವಿಗೆ ಶ್ರಮಿಸಿದರು.

## 'ಶುದ್ಧ ಗಾಳಿ ಮೂಲಭೂತ ಹಕ್ಕು' : ದೆಹಲಿಯಲ್ಲಿ ವಾಯುಮಾಲಿನ್ಯದ ವಿರುದ್ಧ ಬೀದಿಗಿಳಿದ ಜನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯದ ವಿರುದ್ಧ ಭಾನುವಾರ (ನ.9) ಬೃಹತ್ ಪ್ರತಿಭಟನೆ ನಡೆದಿದೆ. ಪೋಷಕರು, ಮಕ್ಕಳು, ಪರಿಸರ ಹೋರಾಟಗಾರರು ಮತ್ತು ಕೆಲ ರಾಜಕೀಯ ನಾಯಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಕನಕದಾಸರ ಸಿದ್ಧಾಂತಗಳು ನಮಗೆಲ್ಲರಿಗೂ ಮಾದರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮೌಲ್ಯಗಳಿಂದ ಕನಕದಾಸರು ಈಗಲೂ ಪ್ರಸ್ತುತರಾಗಿದ್ದಾರೆ ಎಂದು ಶಿಕ್ಷಕಿ ತ್ರಿವೇಣಿ ಬಡ್ನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ಭಕ್ತ ಕನಕದಾಸರ ಜಯಂತ್ಯುತ್ಸವದ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ನಾಡಿನ ಸಂತರು, ಶರಣರು, ದಾರ್ಶನಿಕರ ಸಂದೇಶಗಳು ನಮಗೆ ದಾರಿದೀಪವಾಗಿವೆ. ಭಕ್ತ ಕನಕದಾಸರು ಸಮಾಜ ಸುಧಾರಣೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಇವರ ತತ್ವ-ಸಿದ್ಧಾಂತಗಳು ನಮಗೆಲ್ಲರಿಗೂ ಮಾದರಿಯಾಗಿವೆ ಎಂದರು.

ಈ ಸಂದರ್ಭದಲ್ಲಿ ಎಚ್. ಆರ್. ಭಜಂತ್ರಿ, ಕೆ.ಎಂ. ಹೆರಕಲ್ಲ, ಎಸ್.ಡಿ. ಪಂಡಿತ, ಕವಿತಾ ಬಿನ್ನಾಳ, ಶಭಾನಾ ಢಾಲಾಯತ ಇದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಲಿಂಗಾಯತ ಧರ್ಮ ಭಾಷೆ ಕನ್ನಡ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ನಾಡು-ನುಡಿ, ನೆಲ-ಜಲದ ಸಮಸ್ಯೆಗಳು ಎದುರಾದಾಗ ಅನೇಕ ಹೋರಾಟಗಳಲ್ಲಿ ತೋಂಟ-ದಾರ್ಯ ಮಠದ ಪಾತ್ರ ಹಿರಿದು. ಮಠಗಳು ಕನ್ನಡ ಉಳಿವಿಗಾಗಿ, ಬೆಳವಣಿಗೆಗಾಗಿ ಪ್ರಯತ್ನಿಸಿದಾಗ ನಮ್ಮ ನಾಡು-ನುಡಿ, ಸಂಸ್ಕೃತಿ, ಸಾಹಿತ್ಯ ಬೆಳೆಯಲು ಸಾಧ್ಯ ಎಂದು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.



ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2770ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಕರ್ನಾಟಕದ ಗಡಿಭಾಗ ಚಿಂಚಣಿಯಲ್ಲಿ ಹಾಗೂ ಬೈರನಟ್ಟಿಯಲ್ಲಿ ಭಾಷೆಯ ಉಳಿವಿಗಾಗಿ ಕನ್ನಡ ರಥವನ್ನು ಎಳೆಯುತ್ತಾರೆ. ಕರ್ನಾಟಕದಲ್ಲಿ ಕನ್ನಡ ಮಠವೆಂದರೆ ತೋಂಟದಾರ್ಯ ಮಠ. ಕನ್ನಡ ಜಗದ್ಗುರುಗಳೆಂದರೆ ಸಿದ್ಧಲಿಂಗ ಶ್ರೀಗಳು. 600ಕ್ಕೂ ಹೆಚ್ಚು ಕನ್ನಡ ಮೌಲಿಕ ಗ್ರಂಥಗಳನ್ನು ಪ್ರಕಟಿಸುವ ಮೂಲಕ ಕನ್ನಡ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಶ್ರೀಗಳು ಮಾತನಾಡಿದರು.

ಹು-ಧಾ ಮಹಾನಗರಸಭೆ ನೀಡುವ ರಾಜ್ಯೋತ್ಸವ ಧೀಮಂತ ಪ್ರಶಸ್ತಿಗೆ ಭಾಜನರಾದ ಶಶಿಧರ ತೋಡಕರ ಅವರನ್ನು, ಕನ್ನಡ ಜಾನಪದ ಪರಿಷತ್‌ಗೆ ನೂತನವಾಗಿ ಜಿಲ್ಲಾಧ್ಯಕ್ಷರಾಗಿ ನೇಮಕವಾದ ನಿವೃತ್ತ ಉಪನಿರ್ದೇಶಕ ಐ.ಬಿ. ಬೆನಕೊಪ್ಪರ ಅವರನ್ನು ಮತ್ತು ನೆಲ-ಜಲ-ಭಾಷೆಗಾಗಿ ಹೋರಾಟ ಮಾಡುತ್ತಿರುವ ಕನ್ನಡ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಹನುಮಂತಪ್ಪ ಎಚ್.ಅಬ್ಬಿಗೇರಿ ಇವರುಗಳನ್ನು ಸನ್ಮಾನಿಸಲಾಯಿತು.

ವಚನ ಸಂಗೀತ ಸೇವೆಯನ್ನು ಗುರುನಾಥ್ ಸುತಾರ ಹಾಗೂ ಮೃತ್ಯುಂಜಯ ಹಿರೇಮಠ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥ ಪಠಣವನ್ನು ಅನ್ವಿತಾ ಟಿ.ಪೋತದಾರ ಹಾಗೂ ವಚನ ಚಿಂತನವನ್ನು ತುಳಸಿಪ್ರಿಯಾ ಸಿ.ಶಿರಹಟ್ಟಿ ಮಾಡಿದರು.

> ಧಾರವಾಡದ ಹಿರೇಮಲ್ಲೂರ ಈಶ್ವರನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಶಿಧರ ತೋಡಕರ ಮಾತನಾಡಿ, ಕನ್ನಡ ಮತ್ತು ಕರ್ನಾಟಕ ಎರಡು ಒಂದನ್ನೊಂದು ಬಿಟ್ಟಿರಲಾರವು. ಕರ್ನಾಟಕ್ಕೆ ಗಡಿ ಇದೆ. ಆದರೆ ಕನ್ನಡಕ್ಕೆ ಗಡಿಯ ಹಂಗಿಲ್ಲ. ಲಿಂಗಾಯತರಿಗೆ ಧರ್ಮ, ಭಾಷೆ ಕನ್ನಡ ಒಂದೇ. ಸಿದ್ದಲಿಂಗ ಶ್ರೀಗಳು ಪೀಠಾಧಿಪತಿಗಳಾಗಿ ಕನ್ನಡ ಕೈಂಕರ್ಯಕ್ಕೆ ಕೊನೆಯುಸಿರು ಇರುವವರೆಗೂ ಹೋರಾಡಿದರು. ಕನ್ನಡದ ಜಗದ್ಗುರುಗಳೇ ಆದರು. ಶ್ರೀಮಠದಿಂದ 600ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿದ್ದಾರೆ. ಕನ್ನಡ ಉಳಿದರೆ ನಾವೆಲ್ಲಾ ಉಳಿಯುತ್ತೇವೆ ಎಂದು ಹೇಳುತ್ತಿದ್ದರು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಎಸ್. ಎಸ್. ಹರ್ಲಾಪೂರ ಉಪಸ್ಥಿತರಿದ್ದರು. ದಾಸೋಹ ಸೇವೆಯನ್ನು ಬಸಪ್ಪ ಅಮೃತಪ್ಪ ಪಲ್ಲೇದ, ಅಣ್ಣಿಗೇರಿ ವಹಿಸಿಕೊಂಡಿದ್ದರು. ತೋಂಟದಾರ್ಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಂದ ಕನ್ನಡ ನಾಡು-ನುಡಿಯ ಕುರಿತು ತುಂಬಾ ಆಕರ್ಷಕವಾದ ನೃತ್ಯ ಮತ್ತು ರೂಪಕಗಳ ಪ್ರದರ್ಶನ ನಡೆಯಿತು. ವಿದ್ಯಾರ್ಥಿಗಳ ನೃತ್ಯವನ್ನು ಮನಮೋಹಕವಾಗಿ ಶಿಕ್ಷಕರು ಆಯೋಜನೆ ಮಾಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ ಉಪಾಧ್ಯಕ್ಷ ಡಾ. ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ ಹಾಗೂ ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ಶರಣ ಅಶೋಕ ಹಾದಿಯನ್ನು ಕಾರ್ಯಕ್ರಮ ನಿರೂಪಿಸಿದರು.

## ರಾಣಿ ಚೆನ್ನಮ್ಮ ಪಾರ್ಟಿ ಇನ್ನಷ್ಟು ಬಲಗೊಳ್ಳಲಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾದೇಶಿಕ ರಾಜಕೀಯ ಪಕ್ಷವಾಗಿರುವ ರಾಣಿ ಚೆನ್ನಮ್ಮ ಪಾರ್ಟಿಯನ್ನು ರಾಜ್ಯಮಟ್ಟದಲ್ಲಿ ಇನ್ನಷ್ಟು ಬಲಪಡಿಸಲು ಪಾರ್ಟಿಯು ಸನ್ನದ್ಧಗೊಂಡಿದೆ ಎಂದು ರಾಣಿ ಚೆನ್ನಮ್ಮ ಪಾರ್ಟಿಯ ಸಂಸ್ಥಾಪಕ ಎಂ.ಬಿ. ದೇಸಾಯಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜಕಾರಣದಲ್ಲಿ ಪರಸ್ಪರ ಹೊಂದಾಣಿಕೆಯಿಂದಾಗಿ ಪ್ರಜ್ಞಾವಂತರು ರಾಷ್ಟ್ರೀಯ ಪಕ್ಷಗಳಲ್ಲಿ ವಿಶ್ವಾಸ ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ಬದಲಾದ ಸನ್ನಿವೇಶಗಳಿಂದಾಗಿ ಪ್ರಜ್ಞಾವಂತರು ಸಹಜವಾಗಿ ಪರ್ಯಾಯ ರಾಜಕೀಯ ಪಕ್ಷಗಳತ್ತ ನೋಡುವಂತಾಗಿದೆ. ಈ ಹಿನ್ನೆಲೆಯಲ್ಲಿ ರಾಣಿ ಚೆನ್ನಮ್ಮ ಪಾರ್ಟಿ ರಾಜಕೀಯದಲ್ಲಿ ಹೊಸ ಬದಲಾವಣೆ ತರಲು ಮುಂದಾಗಿದೆ ಎಂದಿದ್ದಾರೆ. ರಾಜ್ಯದ ಎಲ್ಲ ಜಿಲ್ಲೆ, ತಾಲೂಕು, ಗ್ರಾಮ ಮಟ್ಟದಲ್ಲಿ ರಾಣಿ ಚೆನ್ನಮ್ಮ ಪಾರ್ಟಿಯನ್ನು ಇನ್ನಷ್ಟು ಕ್ರಿಯಾಶೀಲಗೊಳಿಸುವ ಹಿರಿದಾದ ಉದ್ದೇಶವನ್ನು ಹೊಂದಲಾಗಿದ್ದು, ಹಿರಿಯ-ಕಿರಿಯ ರಾಜಕಾರಣಿಗಳು, ಮುಖಂಡರು, ಪ್ರಜ್ಞಾವಂತರು, ಸಮಾಜಸೇವಕರು ಪಕ್ಷವನ್ನು ಸಂಘಟನಾತ್ಮಕವಾಗಿ ಬೆಳೆಸುವ ಮೂಲಕ ರಾಜಕೀಯ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಮುಂದಾಗಬೇಕು. ಆಸಕ್ತರು ಸ್ವಯಂ ಪ್ರೇರಣೆಯಿಂದ ಬಂದಲ್ಲಿ ರಾಣಿ ಚೆನ್ನಮ್ಮ ಪಾರ್ಟಿಯಲ್ಲಿ ನೇಮಕ ಆದೇಶ ನೀಡಿ, ಪ್ರಮಾಣ ಪತ್ರದೊಂದಿಗೆ ಗೌರವಿಸಲಾಗುವದು. ಮಾಹಿತಿಗಾಗಿ ಎಂ.ಬಿ. ದೇಸಾಯಿ, ರಾಣಿ ಚೆನ್ನಮ್ಮ ಪಾರ್ಟಿಯ ಸಂಸ್ಥಾಪಕ ಅಧ್ಯಕ್ಷರು, ದ್ಯಾಮವ್ವನ ಕಟ್ಟೆ ಹತ್ತಿರ, ಒಕ್ಕಲಗೇರಿ ಗದಗ, ಮೊ: 9980383723, 7483792645 ವಿಳಾಸಕ್ಕೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

### ದೇವಗೊಂಡನಕಟ್ಟಿ ಗ್ರಾಮದಲ್ಲಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜೀವನ ವಿಕಾಸಕ್ಕೆ ಧರ್ಮಾಚರಣೆ ಅವಶ್ಯಕ



■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ಮಾನವ ಯಾವಾಗಲೂ ಸುಖಾಪೇಕ್ಷಿ. ಆದರ್ಶ ಮತ್ತು ಅರಿವಿನಿಂದ ಮಾತ್ರ ಜೀವನ ಸಮೃದ್ಧಗೊಳ್ಳಲು ಸಾಧ್ಯ. ಜೀವನ ವಿಕಾಸಕ್ಕೆ ಧರ್ಮಾಚರಣೆ ಬಹಳ ಅವಶ್ಯಕವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಿನ ದೇವಗೊಂಡನಕಟ್ಟಿ ಗ್ರಾಮದಲ್ಲಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಪ್ರತಿಯೊಬ್ಬ ಮನುಷ್ಯ ಜೀವನದಲ್ಲಿ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ವ್ಯರ್ಥವಾಗುತ್ತದೆ. ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮದ ದಶ ವಿಧ ಸೂತ್ರಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ಜಾತಿ-ಮತ-ಪಂಥ ಎನ್ನದೇ ಎಲ್ಲಾ ವರ್ಗದ ಜನರಿಗೆ ವಿಶ್ವ ಬಂಧುತ್ವದ ಆದರ್ಶ ಮೌಲ್ಯಗಳನ್ನು ಬೋಧಿಸಿ ಉದ್ಧರಿಸಿದ್ದನ್ನು ಯಾವತ್ತೂ ಮರೆಯಲಾಗದು. ದೇವಗೊಂಡನಕಟ್ಟಿ ಗ್ರಾಮ ಚಿಕ್ಕದಾದರೂ ಬಹು ದೊಡ್ಡ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತೋಷ ತಂದಿದೆ. ಹೊನ್ನಾಳಿ ಹಿರೇಕಲ್ಮಠದ ಒಡೆಯರ್ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ ಹತ್ತನೇ ವರ್ಷದ ಪುಣ್ಯ ಸ್ಮರಣೋತ್ಸವ ಆಚರಿಸುತ್ತಿರುವುದು ತಮ್ಮೆಲ್ಲರಲ್ಲಿರುವ ಗುರುಭಕ್ತಿಗೆ ಸಾಕ್ಷಿಯಾಗಿದೆ ಎಂದರು.

ಮಾಜಿ ಶಾಸಕ ಅರುಣಕುಮಾರ ಪೂಜಾರ ಮಾತನಾಡಿ, ನಮ್ಮಲ್ಲಿ ಧರ್ಮಾಚರಣೆ ಬೆಳೆದು ಬರಬೇಕು. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನೂ ನೀಡಬೇಕೆಂದರು.

ಜುಂಜಪ್ಪ ಹೆಗ್ಗಪ್ಪನವರ, ಎಸ್.ಎಸ್. ರಾಮಲಿಂಗಣ್ಣನವರ, ಸೋಮಶೇಖರಗೌಡ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಈ ಪವಿತ್ರ ಸಮಾರಂಭದಲ್ಲಿ ಹೊನ್ನಾಳಿ ಡಾ. ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಅವರಗೊಳ್ಳದ ಓಂಕಾರ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಲಿಂಗದಹಳ್ಳಿ ವೀರಭದ್ರ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು ಮತ್ತು ರಾಣೆಬೆನ್ನೂರು ಹಿರೇಮಠದ ಶಿವಯೋಗಿ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ನಡೆಯಿತು. ರಾಣೆಬೆನ್ನೂರಿನ ಕಸ್ತೂರಿ ಪಾಟೀಲ ಮತ್ತು ಹಲಗೇರಿಯ ಗೀತಾ ಅಜ್ಜೋಡಿಮಠ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರ ಸಂಭ್ರಮದ ಅಡ್ಡಪಲ್ಲಕ್ಕಿ ಮಹೋತ್ಸವ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಪಡೆದರು.

> ಸಮಾರಂಭವನ್ನು ಉದ್ಘಾಟಿಸಿದ ಮಾಜಿ ಮುಖ್ಯ ಮಂತ್ರಿ ಮತ್ತು ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿಯವರು ಮಾತನಾಡಿ, ವೀರಶೈವ ಧರ್ಮ ಅತ್ಯಂತ ಪ್ರಾಚೀನ ಧರ್ಮವಾಗಿದೆ. ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ತಪೋವಾಣಿ ಸರ್ವ ಕಾಲಕ್ಕೂ ಅನ್ವಯವಾಗುತ್ತದೆ. ಸಮಾಜದಲ್ಲಿ ಎಲ್ಲರೂ ಸಾಮರಸ್ಯ ಸದ್ಭಾವನೆಯಿಂದ ಬಾಳುವುದು ಅವಶ್ಯಕವಾಗಿದೆ ಎಂದರು.

# ಹತ್ತಿ ಖರೀದಿ ಕೇಂದ್ರ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಗದಗ ಕೋ-ಆಪ್ ಕಾಟನ್ ಸೇಲ್ ಸೋಸಾಯಿಟಿ ಆವರಣದಲ್ಲಿ ಭಾರತೀಯ ಹತ್ತಿ ನಿಗಮ ನಿಯಮಿತ (ಸಿಸಿಐ) ಹುಬ್ಬಳ್ಳಿ ಶಾಖೆ ವತಿಯಿಂದ ಹತ್ತಿ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕೆ ಚಾಲನೆ ದೊರೆಯಿತು.

ಸಂಘದ ಅಧ್ಯಕ್ಷ ಆರ್. ಎಂ. ಮೂಲಿಮನಿ ಖರೀದಿ ಕೇಂದ್ರವನ್ನು ಉದ್ಘಾಟಿಸಿದರು. ನಿರ್ದೇಶಕರಾದ ಎಂ.ಆರ್. ಪಾಟೀಲ, ಕೆ.ಎಚ್. ಪಾಟೀಲ ಮತ್ತು ಸರ್ವ ಸದಸ್ಯರು, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಯಾಳಗಿಶೆಟ್ಟರ ಮತ್ತು ಸಿಬ್ಬಂದಿ ವರ್ಗ ಹಾಗೂ ಭಾರತೀಯ ಹತ್ತಿ ನಿಗಮ ನಿಯಮಿತ (ಸಿಸಿಐ) ಅಧಿಕಾರಿ ಜಿ. ರಮೇಶ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಹಿರೇಮಠದ ಜಾತ್ರಾ ಮಹೋತ್ಸವ ಉದ್ಘಾಟಿಸಿದ ಮಿಥುನ ಪಾಟೀಲ ಅಭಿಮತ

# ಹಿರೇಮಠದ ಕಾರ್ಯ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ನರೇಗಲ್ಲದ ಹಿರೇಮಠವು ಇಲ್ಲಿನ ಜನರಿಗೆ ಸಂಸ್ಕೃತಿ, ಸಂಸ್ಕಾರ ಕಲಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ. ಪ್ರತಿ ವರ್ಷದ ಕಾರ್ತಿಕ ಮಾಸದಲ್ಲಿ ಜಾತ್ರೆಯನ್ನು ಏರ್ಪಡಿಸುವ ಮೂಲಕ ಷ. ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಏಳೆಂಟು ದಿನಗಳ ಕಾಲ ಪ್ರವಚನಗಳನ್ನೇರ್ಪಡಿಸಿ, ಭಕ್ತರ ನೆತ್ತಿಗೆ ಬುತ್ತಿಯನ್ನು ತುಂಬುತ್ತಿದ್ದಾರೆ. ಆದ್ದರಿಂದ ಈ ಹಿರೇಮಠದ ಕಾರ್ಯ ಶ್ಲಾಘನೀಯ ಎಂದು ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ಪಟ್ಟಣದ ಹಿರೇಮಠದಲ್ಲಿ ರವಿವಾರ ಪ್ರಾರಂಭಗೊಂಡ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ನಾಡಿನಲ್ಲಿ ಜನರ ವಿದ್ಯಾಭ್ಯಾಸಕ್ಕೆ ಬಲವಾದ ಬುನಾದಿಯನ್ನು ಹಾಕಿದ್ದು ವೀರಶೈವ ಮಠ-ಮಾನ್ಯಗಳು. ಅನ್ನ ದಾಸೋಹದ ಜೊತೆಗೆ ಶಿಕ್ಷಣದ ದಾಸೋಹವನ್ನೂ ನಡೆಸಿ ಅವರು ನಮ್ಮ ಜನತೆ ಬುದ್ಧಿವಂತರಾಗಲು ಕಾರಣರಾದರು. ಹಿರೇಮಠದ ಶ್ರೀಗಳವರೂ ಸಹ ಶ್ರೀ ರೇಣುಕಾಚಾರ್ಯರ ಹೆಸರಿನಲ್ಲಿ ಸ್ಥಾಪಿಸಿರುವ ಹಿರಿಯ ಪ್ರಾಥಮಿಕ ಶಾಲೆ ಗುಣಮಟ್ಟದ ಶಿಕ್ಷಣ ನೀಡುತ್ತಿದೆ ಎಂದು ಕೇಳಿದ್ದೇನೆ. ಇದರಿಂದ ಈ ಭಾಗದ ಮಕ್ಕಳ ಬಾಳು ಬೆಳಗುತ್ತದೆ. ಅದಕ್ಕಾಗಿ ನಾವೆಲ್ಲರೂ ಶ್ರೀಗಳವರಿಗೆ ಆಭಾರಿಯಾಗಿರಬೇಕೆಂದರು.

ಸಮಾರಂಭವನ್ನುದ್ದೇಶಿಸಿ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿದರು. ದಿವ್ಯ ಸಾನ್ನಿಧ್ಯ ವಹಿಸಿದ್ದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಮನುಷ್ಯ ಕನಿಷ್ಠ ವರ್ಷಕ್ಕೊಮ್ಮೆಯಾದರೂ ಜಾತ್ರಾ ಮಹೋತ್ಸವದ ನೆಪದಲ್ಲಿ ಏಳೆಂಟು ದಿನಗಳ ಕಾಲ ಪುರಾಣ-ಪ್ರವಚನಗಳನ್ನು ಕೇಳಬೇಕು. ಇದನ್ನು ವರ್ಷವಿಡೀ ನೆನಪಿನಲ್ಲಿಟ್ಟುಕೊಂಡು ಕೇಳಿದ ಸಂಗತಿಗಳಲ್ಲಿ ಕೆಲವಷ್ಟನ್ನಾದರೂ ಆಚರಣೆಯಲ್ಲಿ ತರಲು ಪ್ರಯತ್ನಿಸಬೇಕು. ಆಗಲೇ ಮನುಷ್ಯನ ಜನ್ಮ ಸಾರ್ಥಕವಾಗುತ್ತದೆ. ಅದಕ್ಕೆಂದೇ ಪ್ರತಿ ವರ್ಷ ಶ್ರೀಮಠದಲ್ಲಿ ಜಾತ್ರಾಮಹೋತ್ಸವವನ್ನು ಏರ್ಪಡಿಸಲಾಗುತ್ತಿದೆ ಎಂದರು.

ವೇದಿಕೆಯ ಮೇಲೆ ಪ.ಪಂ ಸದಸ್ಯರಾದ ಸಕ್ರೆಪ್ಪ ಹಡಪದ, ಶೇಖಪ್ಪ ಕೆಂಗಾರ, ಸಂಗೀತ ಬಳಗದವರು ಉಪಸ್ಥಿತರಿದ್ದರು. ಶಿಕ್ಷಕ ಎಂ.ಕೆ. ಬೇವಿನಕಟ್ಟಿ ನಿರ್ವಹಿಸಿದರು.

> ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿ, ಈ ಬಾರಿ ಪ್ರತಿ ವರ್ಷದಂತೆ ಹೇಳಲಾಗುವ ಸಿದ್ಧಾಂತ ಶಿಖಾಮಣಿಯ ಜೊತೆಗೆ ಶ್ರೀ ವೀರಭದ್ರೇಶ್ವರ ಚರಿತ್ರೆಯನ್ನೂ ಹೇಳಲು ನಿರ್ಧರಿಸಿದ್ದೇನೆ. ಸಮಯಕ್ಕೆ ಸರಿಯಾಗಿ ಬಂದು ಪ್ರವಚನದ ಅಂಶಗಳನ್ನು ಆಲಿಸಬೇಕು. ಶಾಸಕ ಜಿ.ಎಸ್. ಪಾಟೀಲರು ಧಾರ್ಮಿಕ ಕಾರ್ಯಗಳಿಗೆ ಸಹಾಯ ಹಸ್ತ ಚಾಚಲು ಎಂದಿಗೂ ಮುಂದು. ಈ ಸಾರೆಯ ನಮ್ಮ ಶ್ರೀಮಠದ ಜಾತ್ರಾಮಹೋತ್ಸವವನ್ನು ಅವರ ಪುತ್ರ ಮಿಥುನ ಪಾಟೀಲರು ಉದ್ಘಾಟಿಸಿ ಮೆರಗು ನೀಡಿದ್ದಾರೆಂದರು.

# ಕಾರ್ಯಾಗಾರದ ಸಂಪೂರ್ಣ ಸದ್ಬಳಕೆಯಾಗಲಿ

▶▶ ಮೊದಲನೇ ಪುಟದಿಂದ



ಹಾಗೂ ಖಜಾನೆ-2 ತಂತ್ರಾಂಶವನ್ನು ಸಂಪೂರ್ಣವಾಗಿ ಅರ್ಥ ಮಾಡಿಕೊಂಡು ನೌಕರರಿಗೆ ತಿಂಗಳ ಕೊನೆಯಲ್ಲಿ ವೇತನ ಪಾವತಿಯಾಗುವಂತೆ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಇತ್ತೀಚೆಗೆ ಸರ್ಕಾರದ ಎಲ್ಲ ಯೋಜನೆಗಳ ಅನುಷ್ಠಾನದಲ್ಲಿ ತಾಂತ್ರಿಕತೆ ಅಳವಡಿಸಲಾಗಿದೆ. ಅದೇ ರೀತಿ ನೌಕರರ ವೇತನ ಹಾಗೂ ಸೇವೆಗಳ ಕುರಿತಂತೆ ಎಲ್ಲವುಗಳನ್ನು ತಾಂತ್ರಿಕ ಸಿಬ್ಬಂದಿಗಳು ನಿರ್ವಹಿಸಬೇಕಿದೆ. ನೌಕರರ ಜಿಪಿಎಫ್, ಕೆಜಿಐಡಿ ವಿಮಾ ಸೇರಿದಂತೆ ಎಲ್ಲವನ್ನೂ ಬೆರಳ ತುದಿಯಲ್ಲಿ ಬಳಸುವ ತಂತ್ರಜ್ಞಾನ ರೂಪಿಸಿದೆ. ಅದೇ ರೀತಿ ಎಲ್ಲರೂ ಆರೋಗ್ಯ ಸಂಜೀವಿನಿ ನೋಂದಣಿ ಮಾಡಿಕೊಳ್ಳುವ ಮೂಲಕ ಅನಾರೋಗ್ಯದ ಸಂದರ್ಭದಲ್ಲಿ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕೆಂದು ಹೇಳಿದರು.

ಕಾರ್ಯಾಗಾರದಲ್ಲಿ ಯೋಜನಾಧಿಕಾರಿಗಳಾದ ನೀಲಮಾಬಿ HRMS-2.0 ಮತ್ತು ಪರಿಚಯ/ESR ಕುರಿತು, ಸುಧಾಮಣಿ ಏಂಖಖ ಮತ್ತು ಇಖಖ ಕುರಿತು, ತಾಂತ್ರಿಕ ತರಬೇತುದಾರ ಸುಮಂತ್ HRMS-2.0 Modules ಕುರಿತು ತರಬೇತಿ ನೀಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸಿ ಗಂಗಪ್ಪ ಎಂ, ಅಧಿಕಾರಿಗಳಾದ ಆರ್.ಎಸ್. ಬುರಡಿ, ಹರಿನಾಥಬಾಬು, ಜಿ.ಎಂ. ಮುಂದಿನಮನಿ ಸೇರಿದಂತೆ ನೌಕರ ಸಂಘದ ಜಿಲ್ಲಾ ಪದಾಧಿಕಾರಿಗಳು, ತಾಲೂಕು ಅಧ್ಯಕ್ಷರು, ಪದಾಧಿಕಾರಿಗಳು ಹಾಜರಿದ್ದರು.

## ನಾಗರಿಕರನ್ನು ಅಪರಾಧಿಗಳಂತೆ ನಡೆಸಿಕೊಳ್ಳಲಾಗುತ್ತಿದೆ': ರಾಹುಲ್ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಶಾಂತಿಯುತವಾಗಿ ಶುದ್ಧಗಾಳಿಗಾಗಿ ಹೋರಾಟ ಮಾಡುತ್ತಿರುವ ನಾಗರಿಕರನ್ನು ಏಕೆ ಅಪರಾಧಿಗಳಂತೆ ನಡೆಸಿಕೊಳ್ಳಲಾಗುತ್ತಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ.

ದೆಹಲಿಯಲ್ಲಿ ವಾಯು ಗುಣಮಟ್ಟ ಹದಗೆಡುತ್ತಿರುವುದನ್ನು ವಿರೋಧಿಸಿ ಇಂಡಿಯಾ ಗೇಟ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದ ಪರಿಸರವಾದಿ ವಿಮ್ಲೇಯ ಝಾ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಶಾಂತಿಯುತವಾಗಿ ಪ್ರತಿಭಟಿಸುತ್ತಿದ್ದ ಜನರನ್ನು ಪೊಲೀಸರು ಬಂಧಿಸಿ ಬಸ್ಸಿಗೆ ತಳ್ಳಿ ಅಪರಾಧಿಗಳಂತೆ ನಡೆಸಿಕೊಂಡಿದ್ದಾರೆ ಎಂದು ಸರ್ಕಾರವನ್ನು ಟೀಕಿಸಿದ್ದಾರೆ.

"ಶುದ್ಧ ಗಾಳಿ ಕೇಳುವ ನಾಗರಿಕರ ಮೇಲೆ ದಾಳಿ ಮಾಡುವ ಬದಲು, ಮೊದಲೇ ವಾಯು ಮಾಲಿನ್ಯದ ವಿರುದ್ಧ ನಿರ್ಣಾಯಕ ಕ್ರಮ ಕೈಗೊಳ್ಳಬೇಕೆಂದು ರಾಹುಲ್ ಗಾಂಧಿ ಕರೆ ನೀಡಿದ್ದಾರೆ.

ರಾಷ್ಟ್ರ ರಾಜಧಾನಿಯಲ್ಲಿ ಗಾಳಿಯ ಗುಣಮಟ್ಟ ಹದಗೆಡುತ್ತಿರುವುದನ್ನು ವಿರೋಧಿಸಿ ಪೋಷಕರು ಮತ್ತು ಪರಿಸರ ಕಾರ್ಯಕರ್ತರು ಸೇರಿದಂತೆ ಹಲವಾರು ಜನರು ಭಾನುವಾರ ಇಂಡಿಯಾ ಗೇಟ್‌ನಲ್ಲಿ ಪ್ರತಿಭಟನೆ ನಡೆಸಿದರು.

ಪೊಲೀಸರ ಪ್ರಕಾರ, ಅನುಮತಿಯಿಲ್ಲದೆ ಸಭೆ ಸೇರಿದ್ದಕ್ಕಾಗಿ ಹಲವಾರು ಪ್ರತಿಭಟನಾಕಾರರನ್ನು

# ಕನ್ನಡಿಗರಿಗೆ ಸ್ವಾಭಿಮಾನದ ಬದುಕು ಸಿಗಲಿ

▶▶ ಮೊದಲನೇ ಪುಟದಿಂದ

ಆಗಬೇಕು. ನಾವು ಸರ್ಕಾರಿ ಪದವಿ ಕಾಲೇಜು, ಪಿಯುಸಿ ಕಾಲೇಜು, ಮೊರಾರ್ಜಿ ಕಾಲೇಜು, ಐಟಿಐ, ಆಯುರ್ವೇದಿಕ್ ಕಾಲೇಜನ್ನು ಸವಣೂರಿನಲ್ಲಿ ಮಾಡಿದ್ದೇವೆ. ಶಿಗ್ಗಾವಿಯಲ್ಲಿ ಪಾಲಿಟೆಕ್ನಿಕ್, ಐಟಿಐ ಜಿಟಿಟಿಸಿ, ವೆಟರ್ನರಿ ಐಟಿಐ ಶಿಕ್ಷಣ ಸಂಸ್ಥೆಗಳನ್ನು ನಮ್ಮ ಕ್ಷೇತ್ರಕ್ಕೆ ತಂದಿರುವ ಹೆಮ್ಮೆ ಇದೆ. ಇನ್ನಷ್ಟು ಶಿಕ್ಷಣ ಸಂಸ್ಥೆ ತರುವ ಇಚ್ಛೆ ಇದೆ ಎಂದರು.

ಕನ್ನಡಿಗರಿಗೆ ಉದ್ಯೋಗ ಸಿಗಬೇಕಿದೆ. ಬೆಂಗಳೂರಿನಲ್ಲಿ ಶೇ. 65ರಷ್ಟು ಜನರು ಹೊರಗಿನವರೇ ಇದ್ದಾರೆ. ನಾನು ಬೆಂಗಳೂರಿನಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಹೋದಾಗ ಅಲ್ಲಿ ಉತ್ತರ ಭಾರತೀಯರೇ ಹೆಚ್ಚಿದ್ದರು. ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗ ಕೊಡುವುದು ಬಹಳ ಮುಖ್ಯ. ಎಲ್ಲ ಹಂತದಲ್ಲಿ ಕನ್ನಡ ಕಡ್ಡಾಯ ಮಾಡುವ ಕಾನೂನು ನಾನು ತಂದಿದ್ದೆ. ಅದನ್ನು ಈಗಿನ ಸರ್ಕಾರ ಅನುಷ್ಠಾನ ಮಾಡುತ್ತಿಲ್ಲ. ಕನ್ನಡವನ್ನು ಎಲ್ಲರೂ ಬೆಳೆಸುವುದು ಮುಖ್ಯ. ಆ ಕೆಲಸವನ್ನು ಸವಣೂರಿನಲ್ಲಿ ಕೀರ್ತಿ ಸಂಸ್ಥೆ ಯಶಸ್ವಿಯಾಗಿ ಮಾಡುತ್ತಿದೆ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಜ್ಞಾನ ಮತ್ತು ಧ್ಯಾನ ಮುಖ್ಯ. ಎಲ್ಲದರ ಬಗ್ಗೆ ಜ್ಞಾನವನ್ನು ಪಡೆಯಬೇಕು ಮತ್ತು ಧ್ಯಾನ ಮಾಡುವುದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ.

ಯಾಕೆ, ಏನು, ಎಲ್ಲಿ, ಎಷ್ಟು ಎನ್ನುವ ಪ್ರಶ್ನೆ ಹಾಕಿದಾಗ ತಾರ್ಕಿಕವಾಗಿ ಚಿಂತನೆ ಮಾಡಲು ಹಚ್ಚುತ್ತದೆ. ಆಗ ಯಾವುದೇ ಸಮಸ್ಯೆ ಬಂದರೂ ಅದನ್ನು ಬಗೆಹರಿಸುವ ಶಕ್ತಿ ಬರುತ್ತದೆ. ಪ್ರಶ್ನಿಸುವ ಗುಣ ಬೆಳೆಸಿಕೊಳ್ಳಬೇಕು. ಒಮ್ಮೆ ವಿದ್ಯಾರ್ಥಿ ಆದ ಮೇಲೆ ಜೀವನ ಪರ್ಯಂತ ವಿದ್ಯಾರ್ಥಿ ಜೀವನ ಇರುತ್ತದೆ. ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳಬೇಕು. ಯಾರಿಗೆ ಜ್ಞಾನ ಇದೆಯೋ ಅವರು ಜಗತ್ತನ್ನು ಆಳುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ಷ.ಬ್ರ. ಡಾ. ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀಮದ್ ವಿಭೂತಿಪುರ, ವೀರಸಿಂಹಾಸನ ಸಂಸ್ಥಾನಮಠ ಬೆಂಗಳೂರು ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಕಾಲೇಜಿನ ಅಧ್ಯಕ್ಷ ಶಶಿಕಲಾ ಪೊಲೀಸ್‌ಗೌಡ್ರ, ಶಂಕರಗೌಡ ಪೊಲೀಸ್‌ಗೌಡ್ರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಎಲ್.ಕೆ ಅಡ್ವಾಣಿಯನ್ನು ಹಾಡಿ ಹೊಗಳಿದ ಶಶಿ ತರೂರ್ : ಅಂತರ ಕಾಯ್ದುಕೊಂಡ ಕಾಂಗ್ರೆಸ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಉಪ ಪ್ರಧಾನಿ ಎಲ್.ಕೆ. ಅಡ್ವಾಣಿ ಅವರನ್ನು 'ನಿಜವಾದ ಮುತ್ಸದ್ದಿ' ಎಂದು ಬಣ್ಣಿಸಿದ ಪಕ್ಷದ ಸಂಸದ ಶಶಿ ತರೂರ್ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಿಂದ ಕಾಂಗ್ರೆಸ್ ಅಂತರ ಕಾಯ್ದುಕೊಂಡಿದೆ.

ಶನಿವಾರ (ನ.8) ಅಡ್ವಾಣಿಯವರ 98ನೇ ಹುಟ್ಟುಹಬ್ಬದ ಪ್ರಯುಕ್ತ ಪೋಸ್ಟ್ ಹಾಕಿ ಶುಭಾಶಯ ಕೋರಿದ್ದ ತರೂರ್, "ಸಾರ್ವಜನಿಕ ಸೇವೆಗೆ ಅಡ್ವಾಣಿಯವರ ಅಚಲ ಬದ್ಧತೆ, ಅವರ ನಮ್ರತೆ ಮತ್ತು ಸಭ್ಯತೆ ಹಾಗೂ ಆಧುನಿಕ ಭಾರತದ ಪಥವನ್ನು ರೂಪಿಸುವಲ್ಲಿ ಅವರ ಪಾತ್ರ ಶ್ಲಾಘಿಣೀಯ" ಎಂದಿದ್ದರು. "ಅಡ್ವಾಣಿ ನಿಜವಾದ ರಾಜ-ಕಾರಣಿ, ಅವರ ಸೇವಾ ಜೀವನವು ಅನುಕರಣೀಯವಾಗಿದೆ" ಎಂದು ಕೊಂಡಾಡಿದ್ದರು.

ಹಲವಾರು ಸಾಮಾಜಿಕ ಮಾಧ್ಯಮ ಬಳಕೆದಾರರು ತರೂರ್ ಅವರು ಅಡ್ವಾಣಿ ಅವರನ್ನು ಹೊಗಳಿದ್ದನ್ನು ಪ್ರಶ್ನಿಸಿದ್ದಾರೆ, 1980ರ ದಶಕದ ಉತ್ತರಾರ್ಧದಲ್ಲಿ ಮತ್ತು 1990ರ ದಶಕದ ಆರಂಭದಲ್ಲಿ ಅಯೋಧ್ಯೆಯಲ್ಲಿ ಬಾಬರಿ ಮಸೀದಿಯ ಸ್ಥಳದಲ್ಲಿ ರಾಮ ಮಂದಿರವನ್ನು ನಿರ್ಮಿಸಲು ಅಡ್ವಾಣಿ ರ್‍ಯಾಲಿ ನಡೆಸಿದ್ದನ್ನು ತರೂರ್‌ಗೆ ನೆನಪಿಸಿದ್ದಾರೆ.

# ನಿವೃತ್ತ ಸೈನಿಕರಿಗೆ ಆರೋಗ್ಯದ ಕಾಳಜಿಯಿರಲಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಇರುವಷ್ಟು ದಿನ ಎಲ್ಲರೂ ಆರೋಗ್ಯದಿಂದ ಇರುವುದು ಮುಖ್ಯ. ಆದ್ದರಿಂದ ನಿವೃತ್ತ ಸೈನಿಕರಿಗೆಲ್ಲರಿಗೂ ಆರೋಗ್ಯದ ಬಗ್ಗೆ ಕಾಳಜಿ ಇರಲಿ ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲಕ್ಕಿಂತ ಮಿಗಿಲಾದ ಸಂಪತ್ತು ಆರೋಗ್ಯ ಸಂಪತ್ತು. ಸೇವೆಯಲ್ಲಿರುವಷ್ಟು ದಿನ ನಮಗೆ ಭಾರತ ಮಾತೆಯ ಸೇವೆ ಮಾಡುವ ಭಾಗ್ಯ ಸಿಕ್ಕಿತ್ತು. ಅದನ್ನು ನಿಸ್ಪೃಹತೆಯಿಂದ ಮಾಡಿ ಬಂದಿದ್ದೇವೆ. ಈಗ ನಮ್ಮ ಕುಟುಂಬದೊಂದಿಗೆ ಇರುವ ಸಂದರ್ಭದಲ್ಲಿ ಯಾವ ಕಾರಣಕ್ಕೂ ಆರೋಗ್ಯವನ್ನು ಹಾಳು ಮಾಡಿಕೊಳ್ಳದೆ ಸುಖ, ಸಂತೋಷ, ನೆಮ್ಮದಿಯಿಂದ ಬದುಕೋಣ ಎಂದರು.

ಜೀವಿತಾವಧಿ ಪತ್ರವನ್ನು ಕೊಟ್ಟಿಲ್ಲದವರು ಕೂಡಲೇ ಕೊಡಬೇಕು. ಇಲ್ಲವಾದರೆ ಪಿಂಚಣಿಗೆ ತೊಂದರೆಯಾಗುತ್ತದೆ. ಸದಸ್ಯರು ಪ್ರತಿ ತಿಂಗಳ ಮಾಸಿಕ ಸಭೆಗೆ ತಪ್ಪದೇ ಹಾಜರಾದರೆ ಸಭೆಯಲ್ಲಿನ ವಿಷಯಗಳು ತಿಳಿಯುತ್ತವೆ.

ಇಂದಿನಿಂದ ಪ್ರಾರಂಭಗೊಂಡಿರುವ ಹಿರೇಮಠದ ಜಾತ್ರಾ ಮಹೋತ್ಸವದಲ್ಲಿ ನಾವೂ ಪಾಲ್ಗೊಂಡು ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರ ಪ್ರವಚನ ಕೇಳಿ ಜ್ಞಾನ ವೃದ್ಧಿಸಿಕೊಳ್ಳೋಣ ಎಂದರು.

ಮಾಸಿಕ ಸಭೆಯಲ್ಲಿ ಬಸವೇಶ್ವರ ಚಿಕ್ಕೊಪ್ಪದ, ಶಿವಪ್ಪ ಹಂಡಿ, ಸಂಗಪ್ಪ ಕುಷ್ಟಗಿ, ರಾಮಪ್ಪ ರೋಣದ, ಶಶಿಕಾಂತ ಕರಡಿ, ಗುರುಶಾಂತಗೌಡ ಮಲ್ಲನಗೌಡ್ರ, ಈಶ್ವರಚಂದ್ರ ಬಾಗಲಿ, ಆಂಜನೇಯ ಪೂಜಾರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಮಂದಾಲಪ್ಪ ಸಂಗನಾಳ, ದಾದಾಸಾಬ ನದಾಫ್, ಈರಪ್ಪ ದೊಡ್ಡಣ್ಣವರ ಇನ್ನಿತರರು ಪಾಲ್ಗೊಂಡಿದ್ದರು.

## ಕ್ರೀಡಾಕೂಟದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ತಾಲೂಕು ಮಟ್ಟದ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸಹನಾ ಬೇಗಂ ಗುಡಗೇರಿ 200 ಮೀ ಓಟದಲ್ಲಿ ಪ್ರಥಮ, ಅಡೆತಡೆ ಓಟದಲ್ಲಿ ತೃತೀಯ, ಹುಲಿಗೆವ್ವ ಗಾಜಿ 1500 ಮೀ ಓಟದಲ್ಲಿ ಪ್ರಥಮ, 3000 ಮೀ ಓಟದಲ್ಲಿ ತೃತೀಯ, ಸುಫಿಯಾಬೇಗಂ ಗುಡಗೇರಿ 400 ಮೀ ಓಟದಲ್ಲಿ ಪ್ರಥಮ, 100 ಮೀ ಓಟದಲ್ಲಿ ತೃತೀಯ, ರೋಹಿಣಿ ಹಿರೇಹಾಳ ಬಲ್ಲೆ ಎಸೆತದಲ್ಲಿ ಪ್ರಥಮ, ಲಕ್ಷ್ಮವ್ವ ಚೂರಗಸ್ತಿ ನಡಿಗೆ ಸ್ಪರ್ದೆದಲ್ಲಿ ದ್ವಿತೀಯ, 400 ಮೀ ರಿಲೇ ಓಟದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ದೈಹಿಕ ಶಿಕ್ಷಕಿ ಜಯಶೀಲಾ ಜ್ಯೋತಿ ತಿಳಿಸಿದ್ದಾರೆ.

### ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ಘೋಷಿಸಿ, ಖರೀದಿ ಕೇಂದ್ರ ಆರಂಭಿಸುವಂತೆ ರೈತರ ಆಗ್ರಹ

# ಸರ್ಕಾರದಿಂದ ನೇರ ಖರೀದಿ ವ್ಯವಸ್ಥೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೆಕ್ಕೆಜೋಳ ಬೆಳೆ ಕಟಾವು ಮುಗಿದಿರುವಾಗ ಮಾರುಕಟ್ಟೆಯಲ್ಲಿ ಮೆಕ್ಕೆಜೋಳದ ಬೆಲೆ ಸರ್ಕಾರ ಘೋಷಿಸಿರುವ ಬೆಂಬಲ ಬೆಲೆಗಿಂತಲೂ ಕಡಿಮೆಯಾಗಿ ಕುಸಿದಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಸರ್ಕಾರದ ನಿರ್ಲಕ್ಷ್ಯದಿಂದ ರೈತರು ಕಂಗಾಲಾಗಿದ್ದು, ತಕ್ಷಣ ಬೆಂಬಲ ಬೆಲೆ ಖರೀದಿ ಕೇಂದ್ರ ಆರಂಭಿಸಬೇಕೆಂಬ ಆಗ್ರಹ ಕೃಷಿಕರಿಂದ ವ್ಯಕ್ತವಾಗಿದೆ.

ಈ ಕುರಿತು ಲಕ್ಷ್ಮೇಶ್ವರ ತಾಲೂಕಾ ಸಮಗ್ರ ರೈತ ಹೋರಾಟ ಸಮಿತಿ ಹಾಗೂ ಕೃಷಿಕ ಸಮಾಜ (ನವದೆಹಲಿ) ಸಂಘಟನೆಯ ವತಿಯಿಂದ ತಹಸೀಲ್ದಾರರ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.



ಈ ವೇಳೆ ಉತ್ತರ ಕರ್ನಾಟಕ ಮಹಾಸಭೆಯ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ರೈತ ಮುಖಂಡ ಮಂಜುನಾಥ ಮಾಗಡಿ, ಕೃಷಿಕ ಸಮಾಜ (ನವದೆಹಲಿ) ತಾಲೂಕಾಧ್ಯಕ್ಷ ಚನ್ನಪ್ಪ ಷಣ್ಮುಖ ಮಾತನಾಡಿ, ಈ ಭಾಗದ ಪ್ರಮುಖ ಬೆಳೆ ಮೆಕ್ಕೆಜೋಳ ಈಗಾಗಲೇ ಕಟಾವಾಗಿದೆ. ಆದರೆ ಮಾರುಕಟ್ಟೆಯಲ್ಲಿ ದರ ರೂ. 1800ಕ್ಕೆ ಕುಸಿದಿದೆ. ರೈತರು 25-30 ಸಾವಿರ ರೂ. ಖರ್ಚು ಮಾಡಿ ಬೆಳೆದ ಬೆಳೆಗೆ ಇಷ್ಟೊಂದು ಕಡಿಮೆ ಬೆಲೆ ದೊರಕುತ್ತಿರುವುದು ಅತ್ಯಂತ ವಿಷಾದನೀಯ. ಸರ್ಕಾರ ತಕ್ಷಣ 2400 ರೂ. ಬೆಂಬಲ ಬೆಲೆ ನಿಗದಿ ಮಾಡಿ ಖರೀದಿ ಪ್ರಾರಂಭಿಸಬೇಕು ಎಂದು ಒತ್ತಾಯಿಸಿದರು.

ಬೆಂಬಲ ಬೆಲೆ ನಿಯಮದಂತೆ ಮಾರುಕಟ್ಟೆಯಲ್ಲಿ ದರ ಕುಸಿದ ತಕ್ಷಣ ಖರೀದಿ ಕೇಂದ್ರ ಆರಂಭವಾಗಬೇಕು. ಆದರೆ ಸರ್ಕಾರ ಇನ್ನೂ ಕೇಂದ್ರ ತೆರೆಯದಿರುವುದು ರೈತರ ಕೋಪಕ್ಕೆ ಕಾರಣವಾಗಿದೆ ಎಂದು ರೈತ ಚಂಬಣ್ಣ ಬಾಳಿಕಾಯಿ ಆಕ್ರೋಶ ವ್ಯಕ್ತಪಡಿಸಿದರು.

> ರೈತರು ವರ್ಷವಿಡೀ ಕಷ್ಟಪಟ್ಟು ಬೆಳೆದ ಬೆಳೆಗೆ ಬೆಲೆಯೇ ಇಲ್ಲದೆ ಕಂಗಾಲಾಗಿದ್ದಾರೆ. ಈ ಕೂಡಲೇ ಸರ್ಕಾರ ಪ್ರತಿ ಕ್ವಿಂಟಲ್ ಮೆಕ್ಕೆ ಜೋಳಕ್ಕೆ 2400 ರೂಪಾಯಿ ಬೆಂಬಲ ಬೆಲೆ ಘೋಷಿಸಿ ಖರೀದಿ ಕೇಂದ್ರಗಳನ್ನು ತೆರೆದು ಖರಿದಿಸಲು ಮುಂದಾಗಬೇಕು. ಇಲ್ಲದಿದ್ದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ.
>
> -ರವಿಕಾಂತ ಅಂಗಡಿ.
> ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ.

ನಾಲ್ಕು ದಿನಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸದಿದ್ದರೆ, ರೈತರು ಶ್ರೀಮಂತಗಡ ಹೊಳಲಮ್ಮನ ಗುಡ್ಡದಿಂದ ಲಕ್ಷ್ಮೇಶ್ವರದವರೆಗೆ ಪಾದಯಾತ್ರೆ ಮಾಡಿ ಶಿಗ್ಲಿ ಕ್ರಾಸ್‌ನಲ್ಲಿ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಿದ್ದಾರೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಎಂ.ಎಸ್. ದೊಡ್ಡಗೌಡರ, ಟಾಕಪ್ಪ ಸಾತಪುತೆ, ನಾಗರಾಜ ಚಿಂಚಲಿ, ನೀಲಪ್ಪ ಕರ್ಜಕಣ್ಣನವರ, ಮಲ್ಲಪ್ಪ ಅಂಕಲಿ, ಹೊನ್ನಪ್ಪ ವಡ್ಡರ, ಸೋಮಣ್ಣ ಡಾನಗಲ್, ಚಂದ್ರು ಮಾಗಡಿ, ಗುರಪ್ಪ ಮುಳುಗುಂದ, ಗಣೇಶ್ ನೂಲ್ವಿ, ಮಲ್ಲನಗೌಡ ಪಾಟೀಲ, ಬಸವರಾಜ ಜಾಲಗಾರ, ಜುಂಜನಗೌಡ ನರಸಮ್ಮನವರ, ಮಹಾಂತೇಶ, ದೇವಪ್ಪ ಲಮಾಣಿ ಹಾಗೂ ಸುತ್ತಮುತ್ತಲಿನ ಗ್ರಾಮದ ಅನೇಕ ರೈತರು ಭಾಗವಹಿಸಿದ್ದರು.

### ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮತದಾರರ ಜಾಗೃತಿ, ಪಾಲ್ಗೊಳ್ಳುವಿಕೆ (SVEEP) ಸಭೆ

# ಯುವ ಮತದಾರರಲ್ಲಿ ಅರಿವು ಮೂಡಿಸಿ



> ಪ್ರತ್ಯೇಕವಾಗಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶಾಲೆ-ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳು, ಮತದಾರರ ರ‍್ಯಾಲಿಗಳು, ಕಿರುಚಿತ್ರ ಪ್ರದರ್ಶನ, ಮತದಾರ ಪ್ರೋತ್ಸಾಹ ಸ್ಪರ್ಧೆಗಳು ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಪಿ.ಎಸ್. ವಸ್ತ್ರದ ಸಲಹೆ ನೀಡಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣೆಯು ಪ್ರಜಾಪ್ರಭುತ್ವದ ಹಬ್ಬ. ಪ್ರತಿಯೊಬ್ಬ ನಾಗರಿಕನು ತನ್ನ ಮತದಾನದ ಹಕ್ಕನ್ನು ಚಲಾಯಿಸುವ ಮೂಲಕ ರಾಷ್ಟ್ರ ನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು. ಈ ನಿಟ್ಟಿನಲ್ಲಿ ಸರ್ಕಾರದ ವಿವಿಧ ಇಲಾಖೆ, ಶಿಕ್ಷಣ ಸಂಸ್ಥೆಗಳು, ಹಾಗೂ ಸಾಮಾಜಿಕ ಸಂಘಟನೆಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ ಕರೆ ನೀಡಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ಮತದಾರರ ಜಾಗೃತಿ ಮತ್ತು ಪಾಲ್ಗೊಳ್ಳುವಿಕೆ (SVEEP) ಸಭೆಯಲ್ಲಿ ಮುಂಬರುವ ಚುನಾವಣೆಗಳ ಹಿನ್ನೆಲೆಯಲ್ಲಿ ಮತದಾರರಲ್ಲಿ ಅರಿವು ಮೂಡಿಸುವ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವ ಮತದಾರರು ಚುನಾವಣೆಯ ಪ್ರಮುಖ ಶಕ್ತಿ. ಅವರಲ್ಲಿ ಅರಿವು ಮೂಡಿಸಲು ಸಾಮಾಜಿಕ ಜಾಲತಾಣಗಳ ಸದ್ಬಳಕೆ ಮಾಡಿಕೊಳ್ಳಬೇಕು. ವಿಡಿಯೋ, ಪೋಸ್ಟರ್, ಸಣ್ಣ ಜಾಹೀರಾತುಗಳ ಮೂಲಕ ಮತದಾನದ ಮಹತ್ವವನ್ನು ತಲುಪಿಸಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸದಸ್ಯರಿಗೆ ಮತದಾರರ ಶೇಕಡಾವಾರು ಹೆಚ್ಚಿಸುವ ಕಾರ್ಯವನ್ನು ಗುರಿಯನ್ನಾಗಿಸಿಕೊಂಡು ಕಾರ್ಯ ಯೋಜನೆ ರೂಪಿಸಬೇಕು ಎಂದು ಸೂಚಿಸಿದರು.

ಸ್ವೀಪ್ ಅಭಿಯಾನವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ಜಿಲ್ಲೆಯ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸಿ, ಪ್ರಜಾಸತ್ತಾತ್ಮಕ ಚೇತನ ಹೆಚ್ಚಿಸುವುದು ಸಭೆಯ ಪ್ರಮುಖ ಉದ್ದೇಶವಾಗಿದೆ ಎಂದು ಎಂದು ಪಿ.ಎಸ್. ವಸ್ತ್ರದ ತಿಳಿಸಿದರು.

'ಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಹಾಯಕ ಆಯುಕ್ತ ಗಂಗಪ್ಪ ಎಂ, ಆರ್.ಎಸ್. ಬುರಡಿ, ಸಿದ್ದಲಿಂಗ ಮಸಾನಾಯಕ, ಡಾ. ಎಸ್.ಎಸ್. ನೀಲಗುಂದ, ಪದ್ಮಾವತಿ ಜಿ, ಅಮಿತ್ ಬಿದರಿ, ವಸಂತ ಮಡ್ಲೂರ, ಶಿವಕುಮಾರ ಕುರಿಯವರ, ಶರಣು ಗೋಗೇರಿ, ಜಿ.ಎಂ. ಮುಂದಿನಮನಿ, ಕೆ. ಮಹಾಂತೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಸೀಲ್ದಾರರು, ಶಿಕ್ಷಣ ಇಲಾಖೆಯ ಪ್ರತಿನಿಧಿಗಳು ಹಾಗೂ ಸ್ವೀಪ್ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಪರಾಧಿಗಳ ರಕ್ಷಣೆಗೆ ನಿಂತ ಸರ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಕ್ರಿಮಿನಲ್‌ಗಳು, ಭಯೋತ್ಪಾದಕರಿಗೆ ದಂಡನೆ ಕೊಡಬೇಕಾದ ಸರ್ಕಾರ ರಾಜಾಶ್ರಯ ನೀಡಿರುವದನ್ನು ನೋಡಿದರೆ ರಾಜ್ಯದಲ್ಲಿ ಗೃಹ ಇಲಾಖೆ ಜನಪರ ಕಾರ್ಯ ಬಿಟ್ಟು ಅಪರಾಧಿಗಳ ರಕ್ಷಣೆಗೆ ನಿಂತಿದೆಯೋ ಎಂಬ ಪ್ರಶ್ನೆ ಪ್ರಜ್ಞಾವಂತ ನಾಗರಿಕ ಸಮಾಜದಲ್ಲಿ ಎದ್ದಿದ್ದು, ಈ ಪ್ರಕರಣವನ್ನು ಎನ್‌ಐಎಗೆ ಒಪ್ಪಿಸಬೇಕೆಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಆಗ್ರಹಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಅವರು, ಅಪರಾಧಿಗಳು ಐಷಾರಾಮಿ ಹೊಟೇಲ್‌ಗಳಿಗೆ ಹೋಗಬೇಕಾದ ಅವಶ್ಯಕತೆ ಇಲ್ಲ, ಜೈಲಿಗೆ ಹೋದರೆ ಸಾಕು. ಅಲ್ಲಿ ಎಲ್ಲವೂ ಸಿಗುತ್ತದೆ. ಭಯೋತ್ಪಾದಕನ ಕೈಗೆ ಮೊಬೈಲ್ ಸಿಗುವುದಾದರೆ, ದೇಶದ್ರೋಹದ ಚಟುವಟಿಕೆಗೆ ರಾಜಾಶ್ರಯ ನೀಡಿದಂತದಾಗಿದೆ. ಇದು ರಾಜ್ಯದ ಜನತೆಗೆ ಮತ್ತು ಭಯೊತ್ಪಾದಕ ಕೃತ್ಯಗಳಲ್ಲಿ ವೀರ ಮರಣ ಹೊಂದಿದ ಹುತಾತ್ಮ ಯೋಧರಿಗೆ ಮತ್ತು ಪ್ರಾಣತೆತ್ತ ಪ್ರಜೆಗಳಿಗೆ ಮಾಡಿದ ಅನ್ಯಾಯವಾಗಿದೆ.

ಮುಖ್ಯಮಂತ್ರಿಗಳ ತವರು ಜಿಲ್ಲೆ ಮೈಸೂರಿನಲ್ಲಿ ಮಾದಕವಸ್ತು ಉತ್ಪಾದನಾ ಕಾರ್ಖಾನೆ ಆರಂಭವಾಗುತ್ತದೆ. ಕರ್ನಾಟಕದವರಿಗೆ ಮಾಹಿತಿಯೇ ಇಲ್ಲ, ಮಹಾರಾಷ್ಟ್ರ ಪೊಲೀಸರು ಬಂದು ಹಿಡಿಯುತ್ತಾರೆ. ಇದಕ್ಕೆ ರಾಜಾಶ್ರಯವೇ ಕಾರಣ ಎಂದು ದೂರಿದ್ದಾರೆ.

ರಾಜ್ಯದ ಜೈಲಿನ ಇಂಥ ಚಟುವಟಿಕೆಗಳ ಕುರಿತು ಎನ್‌ಐಎ ಇಲ್ಲಿನ ಬೇಹುಗಾರಿಕಾ ದಳಕ್ಕೆ 4 ತಿಂಗಳ ಹಿಂದೆ ಎಚ್ಚರಿಕೆ ಕೊಟ್ಟಿತ್ತು. ಆದರೂ, ನಿರ್ಲಕ್ಷ್ಯ ವಹಿಸಿರುವುದು ಸರ್ಕಾರದ ಕೃಪೆಯಾಗಿದೆ. ಆ ಕೃಪೆಗೆ ಸಿಎಂ, ಗೃಹ ಸಚಿವರು ಹೊಣೆ ಹೊತ್ತುಕೊಳ್ಳಬೇಕು. ಆದ್ದರಿಂದ ಮುಖ್ಯಮಂತ್ರಿ, ಗೃಹ ಸಚಿವರಿಗೆ ಅಧಿಕಾರದಲ್ಲಿ ಇರುವ ನೈತಿಕತೆ ಇಲ್ಲ. ಅವರು ರಾಜೀನಾಮೆ ಕೊಡಬೇಕು. ಯಾರೋ ಇಬ್ಬರು ಅಧಿಕಾರಿಗಳನ್ನು ಸಸ್ಪೆಂಡ್ ಮಾಡಿದರೆ ಪ್ರಕರಣದ ಗಂಭೀರತೆ ಅರ್ಥವಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.



ಗದಗ ನಗರದ ಸ.ಹಿ.ಪ್ರಾ.ಕ.ಗಂ.ಶಾಲೆ ನಂ. 15ರಲ್ಲಿ ಸಂತ ಕನಕದಾಸರ ಜಯಂತ್ಯುತ್ಸವವನ್ನು ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತು. ಪ್ರಧಾನ ಗುರುಗಳಾದ ವ್ಹಿ.ಎನ್. ಬಸಾಪುರ ಕನಕದಾಸರ ಜೀವನ ಚರಿತ್ರೆಯನ್ನು ತಿಳಿಸಿದರು. ಪಿ.ಎಸ್. ಬ್ಯಾಳಿ ನಿರೂಪಿಸಿದರು. ಬಿ.ಯಶೋದಾ ಪ್ರಾಸ್ತಾವಿಕವಾಗಿ ಕನಕದಾಸರ ಕುರಿತು ವಿವರಿಸಿದರು. ವ್ಹಿ.ಬಿ. ಕರಬಸಗೌಡರ ವಂದಿಸಿದರು. ಅತಿಥಿ ಶಿಕ್ಷಕರಾದ ಶೋಭಾ ವಗ್ಗಿ, ಮತ್ತು ಡಿ.ಎಡ್. ವಿದ್ಯಾರ್ಥಿಗಳು, ಶಿಕ್ಷಕರು ಉಪಸ್ಥಿತರಿದ್ದರು.

## ಅತಿರುದ್ರ ಮಹಾಯಾಗ, ಕಿರಿಯ ಕುಂಭಮೇಳ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಅತಿ ರುದ್ರಮಹಾಯಜ್ಞ ಹಾಗೂ ಕಿರಿಯ ಕುಂಭಮೇಳ ನ. 11ರಂದು ನೆರವೇರಲಿದೆ. ಬೆಳಿಗ್ಗೆ 9 ಗಂಟೆಗೆ ಐತಿಹಾಸಿಕ ತ್ರಿಕೋಟೇಶ್ವರ ದೇವಸ್ಥಾನದಿಂದ 5555 ಮಾತೆಯರಿಂದ ಬೃಹತ್ ಕುಂಭದ ಮೆರವಣಿಗೆ ಹಾಗೂ ನಾಗಾ ಸಾಧುಗಳ ಭವ್ಯ ಶೋಭಾಯಾತ್ರೆಯು ನಗರದ ಪ್ರಮುಖ ಮಾರ್ಗಗಳಲ್ಲಿ ಸಂಚರಿಸಿ ವಿದ್ಯಾದಾನ ಸಮಿತಿ ಮೈದಾನದಲ್ಲಿ ಸ್ಥಾಪಿಸಿದ ಯಾಗ ಶಾಲೆಯನ್ನು ಪ್ರವೇಶಿಸುವುದು.

ಮಧ್ಯಾಹ್ನ 12.30 ಗಂಟೆಗೆ ಉದ್ಘಾಟನಾ ಸಮಾರಂಭವು ವಿದ್ಯಾದಾನ ಸಮಿತಿ ಮೈದಾನದಲ್ಲಿ ನೆರವೇರುವುದು. ಈ ಮಹಾಯಜ್ಞದಲ್ಲಿ ಹಿರಿಯ ಸಂತ ಮಹಾಂತರು, ನಾಗಾ ಸಾಧುಗಳು, ಜನಪ್ರತಿನಿಧಿಗಳು ಹಾಗೂ ಗಣ್ಯ ವ್ಯಕ್ತಿಗಳು ಪಾಲ್ಗೊಳ್ಳಲಿದ್ದು, ಅತಿರುದ್ರ ಯಾಗ ಸೇವಾ ಸಮಿತಿಯವರು ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಬಿಆರ್‌ಟಿಎಸ್ ಚಿಗರಿ ಕಾರ್ಯಾಚರಣೆಗೆ ರಾಷ್ಟ್ರ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಷ್ಟ್ರೀಯ ಮಟ್ಟದಲ್ಲಿ ನಗರ ಸಮೂಹ ಸಾರಿಗೆ ವ್ಯವಸ್ಥೆಯಡಿ ಉತ್ತಮ ಸಾರ್ವಜನಿಕ ಸಾರಿಗೆಯನ್ನು ಹೊಂದಿರುವ ನಗರದ (City with Best Public Transport System) ವರ್ಗದಡಿ ಕೊಡಮಾಡುವ 2025ರ ಸಾಲಿನ ನಗರ ಸಾರಿಗೆಯ ಪ್ರಶಾಂಸನ ಪ್ರಶಸ್ತಿ (Commendation Award in Urban Transport) ಯು ಹುಬ್ಬಳ್ಳಿ-ಧಾರವಾಡ ಬಿಆರ್‌ಟಿಎಸ್ ಯೋಜನೆಯ ಚಿಗರಿ ಕಾರ್ಯಾಚರಣೆಗೆ ಲಭಿಸಿದೆ.


ನವದೆಹಲಿಯ Hotel Hyatt Regency Sector-83,Gurugram, Haryanaದಲ್ಲಿ ನಡೆದ ಗಒಖ ಸಮ್ಮೇಳನ 2025ರ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರು, ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ಭಾರತ ಸರ್ಕಾರ ಮತ್ತು ಇತರ ಗಣ್ಯರು ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಈ ಕಾರ್ಯಕ್ರಮದಲ್ಲಿ ಹೆಚ್.ಡಿ.ಬಿ.ಆರ್.ಟಿ.ಎಸ್ ಕಂ.ನಿ. ವ್ಯವಸ್ಥಾಪಕ ನಿರ್ದೇಶಕರಾದ ಸಾವಿತ್ರಿ ಬಿ.ಕಡಿ ಮತ್ತು ನಗರ ಭೂಸಾರಿಗೆ ನಿರ್ದೇಶನಾಲಯ ಬೆಂಗಳೂರು ಇದರ ವಿಶೇಷಾಧಿಕಾರಿ ಮೋನಿಕಾ ಕರ್ಷ್‌ಕರಿ ರಾಜ್ಯವನ್ನು ಪ್ರತಿನಿಧಿಸಿ ಪ್ರಶಸ್ತಿಯನ್ನು ಸ್ವೀಕರಿಸಿದರು.

ಹುಬ್ಬಳ್ಳಿ-ಧಾರವಾಡ ತ್ವರಿತ ಬಸ್ ಸಾರಿಗೆ ಯೋಜನೆಯ ಈ ಯಶಸ್ಸಿಗೆ ಕಾರಣೀಭೂತರಾದ ಜನ ಪ್ರತಿನಿಧಿಗಳು, ಅಧಿಕಾರಿಗಳು ಅವಳಿ ನಗರದ ಸಮಸ್ತ ನಾಗರಿಕರು ಮತ್ತು ಚಿಗರಿ ಪ್ರಯಾಣಿಕರಿಗೆ ಹೆಚ್-ಡಿ ಬಿಆರ್‌ಟಿಎಸ್ ಕಂಪನಿಯು ಅಭಾರಿಯಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಚುನಾವಣೆ

# ಜಿಲ್ಲಾಧ್ಯಕ್ಷರಾಗಿ ರಾಜು ಹೆಬ್ಬಳ್ಳಿ ಪುನರಾಯ್ಕೆ







■ ವಿಜಯಸಾಕ್ಷಿ ಸುದ್ದಿ, ಗದಗ

ಪತ್ರಕರ್ತರ ಪ್ರಾತಿನಿಧಿಕ ಸಂಸ್ಥೆಯಾಗಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಗದಗ ಜಿಲ್ಲಾ ಘಟಕದ 2025-2028ನೇ ಸಾಲಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ರಾಜು ಎಂ.ಹೆಬ್ಬಳ್ಳಿ ಅವರು ನೂತನ ಅಧ್ಯಕ್ಷರಾಗಿ ಚುನಾಯಿತರಾಗಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಖಜಾಂಚಿ ಸ್ಥಾನಕ್ಕೆ ರಾಮಣ್ಣ ವಗ್ಗಿ (ಅವಿರೋಧ), ಪ್ರಧಾನ ಕಾರ್ಯದರ್ಶಿಯಾಗಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಿಣಿ ಸ್ಥಾನಕ್ಕೆ ಅರುಣಕುಮಾರ ಹಿರೇಮಠ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದ್ದಾರೆ. ಜಿಲ್ಲಾ ಕಾರ್ಯದರ್ಶಿಯಾಗಿ ಬನೇಶ ಕುಲಕರ್ಣಿ, ಚಂದ್ರಶೇಖರ ಕುಸ್ಲಾಪುರ, ಸಂಗಪ್ಪ ವ್ಯಾಪಾರಿ, ಜಿಲ್ಲಾ ಉಪಾಧ್ಯಕ್ಷರಾಗಿ ಪ್ರಭುಸ್ವಾಮಿ ಅರವಟಗಿಮಠ, ಅನಿಲ ತೆಂಬದಮನಿ, ವಿರೂಪಾಕ್ಷಪ್ಪ ಕಣವಿ ಚುನಾಯಿತರಾಗಿದ್ದಾರೆ. ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾಗಿ ಆನಂದಯ್ಯ ವಿರಕ್ತಮಠ, ರುದ್ರಗೌಡ ಪಾಟೀಲ, ಮಹಾಲಿಂಗಯ್ಯ ಹಿರೇಮಠ, ಸಂತೋಷಕುಮಾರ ಮುರಡಿ, ವೆಂಕಟೇಶ ಇಮರಾಪುರ, ಗಿರೀಶ ಕಮ್ಮಾರ, ಮಂಜುನಾಥ ಪತ್ತಾರ, ಮಲ್ಲಪ್ಪ ಕಳಸಾಪುರ, ಸಂತೋಷ ಕೊಣ್ಣೂರ, ಶಿವಕುಮಾರ ಶಶಿಮಠ, ನಿಂಗಪ್ಪ ಬೇವಿನಕಟ್ಟಿ, ಅಜಿತಕುಮಾರ ಹೊಂಬಾಳಿ, ಮೌನೇಶ್ವರ ಬಡಿಗೇರ, ಆದರ್ಶ ಕುಲಕರ್ಣಿ, ಯಲ್ಲಪ್ಪ ತಳವಾರ ಚುನಾಯಿತರಾಗಿದ್ದಾರೆ ಎಂದು ಕಾನಿಪ ಗದಗ ಜಿಲ್ಲಾ ಘಟಕದ ಜಿಲ್ಲಾ ಚುನಾವಣಾ ಅಧಿಕಾರಿ ಶಿವಾನಂದ ಹಿರೇಮಠ ತಿಳಿಸಿದ್ದಾರೆ.

> **ಶೇ. 100ರಷ್ಟು ಮತದಾನ**
>
> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ವಿವಿಧ ಜಿಲ್ಲೆಗಳಲ್ಲಿ ನ.9ರಂದು ಏಕಕಾಲಕ್ಕೆ ಚುನಾವಣೆ ನಡೆದಿದ್ದು, ಚುನಾವಣೆ ನಡೆದ ಜಿಲ್ಲೆಗಳ ಪೈಕಿ ಗದಗ ಜಿಲ್ಲೆಯಲ್ಲಿ ಶೇ.100ರಷ್ಟು ಮತದಾನ ನಡೆದು ಗಮನ ಸೆಳೆದಿದೆ. ಅಲ್ಲದೇ, ಜಿಲ್ಲಾ ಚುನಾವಣಾಧಿಕಾರಿ ಶಿವಾನಂದ ಹಿರೇಮಠ ಅವರ ನೇತೃತ್ವದಲ್ಲಿ ಗದುಗಿನ ಮತಕೇಂದ್ರ, ಸಿದ್ಧತೆ ಹಾಗೂ ವ್ಯವಸ್ಥೆ ರಾಜ್ಯದಲ್ಲಿಯೇ ಒಂದು ಮಾದರಿ ಮತಗಟ್ಟೆ ಆಗಿ ಬಿಂಬಿತವಾಗಿದ್ದು ಮತ್ತೊಂದು ವಿಶೇಷ.

> **ಯಾರಿಗೆ ಎಷ್ಟು ಮತ?**
>
> ಜಿಲ್ಲಾ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ-91, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ-111, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ-106, ಜಿಲ್ಲಾ ಕಾರ್ಯದರ್ಶಿಗಳಾದ ಬನ್ನೇಶ ಕುಲಕರ್ಣಿ-104, ಚಂದ್ರಶೇಖರ ಕುಸ್ಲಾಪುರ-92, ಸಂಗಪ್ಪ ವ್ಯಾಪಾರಿ 87, ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ-135, ವಿರೂಪಾಕ್ಷಪ್ಪ ಕಣವಿ-129, ಅನಿಲ ತೆಂಬದಮನಿ-121, ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಆನಂದಯ್ಯ ವಿರಕ್ತಮಠ-125, ರುದ್ರಗೌಡ ಪಾಟೀಲ-122, ಮಹಾಲಿಂಗಯ್ಯ ಹಿರೇಮಠ-118, ಸಂತೋಷಕುಮಾರ ಮುರಡಿ-116, ವೆಂಕಟೇಶ ಇಮರಾಪೂರ-110, ಗಿರೀಶ ಕಮ್ಮಾರ-107, ಮಂಜುನಾಥ ಪತ್ತಾರ-107, ಮಲ್ಲಪ್ಪ ಕಳಸಾಪೂರ-105, ಸಂತೋಷ ಕೊಣ್ಣೂರು-104, ಶಿವಕುಮಾರ ಶಶಿಮಠ-104, ನಿಂಗಪ್ಪ ಬೇವಿನಕಟ್ಟಿ-97, ಅಜಿತ್ ಕುಮಾರ ಹೊಂಬಾಳಿ-95, ಮೌನೇಶ್ವರ ಬಡಿಗೇರ-95, ಆದರ್ಶ ಕುಲಕರ್ಣಿ-90, ಯಲ್ಲಪ್ಪ ತಳವಾರ-86 ಮತಗಳನ್ನು ಪಡೆದು ಆಯ್ಕೆಯಾಗಿದ್ದಾರೆ.



ಗದುಗಿನ ಹಾತಲಗೇರಿ ನಾಕಾದ ಕನಕದಾಸ ವೃತ್ತದಲ್ಲಿ ಜರುಗಿದ ಸಮಾರಂಭದಲ್ಲಿ ವಿಶ್ವ ಹಿಂದೂ ಪರಿಷತ್ತಿನ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕನಕದಾಸರ ಭಾವಚಿತ್ರಕ್ಕೆ ಹೂಮಾಲೆ ಅರ್ಪಿಸಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ರಾಜ್ಯ ಕುರುಬ ಸಮಾಜದ ಅಧ್ಯಕ್ಷ ಹಾಗೂ ಗದಗ ವಿಶ್ವ ಹಿಂದೂ ಪರಿಷತ್ತಿನ ಉಪಾಧ್ಯಕ್ಷ ವೀರಣ್ಣ ಹೇಮಾದ್ರಿ, ಮಾರುತಿ ಪವಾರ್, ಯಶವಂತರ ಕಾಂಬಳೇಕರ್, ಶ್ರೀನಿವಾಸ ಹುಬ್ಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka